ಸಂಪುಟ : 9 ಸಂಚಿಕೆ 136 ಪುಟ : 4 ಬೆಲೆ: 3.00 ಬುಧವಾರ ಜುಲೈ 3 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ


ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 136 Pages : 4 Price : 3.00 Wednesday July 3 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಶ್ರೀ ಕಲ್ಲಯ್ಯಜ್ಜನವರ ಜನ್ಮದಿನೋತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಸ್ಥಳೀಯ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾದ ಪೂಜ್ಯಶ್ರೀ ಕಲ್ಲಯ್ಯಜ್ಜನವರ 54ನೇ ಜನ್ಮದಿನೋತ್ಸವ ಕಾರ್ಯಕ್ರಮವನ್ನು ಜುಲೈ 3ರಂದು ಸಂಜೆ 6 ಗಂಟೆಗೆ ವೀರೇಶ್ವರ ಪುಣ್ಯಾಶ್ರಮದಲ್ಲಿ ಅಶ್ರಮದ ಗುರು-ಬಂಧುಗಳಿಂದ ಹಾಗೂ ಸಕಲ ಸದ್ಭಕ್ತರಿಂದ ಹಮ್ಮಿಕೊಳ್ಳಲಾಗಿದೆ ಎಂದು ಪುಣ್ಯಾಶ್ರಮದ ಪ್ರಕಟಣೆ ತಿಳಿಸಿದೆ.

## ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಮುಳಗುಂದ ಪಟ್ಟಣದ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ ಮುಳಗುಂದ ವ್ಯಾಪ್ತಿಯಲ್ಲಿ ಬರುವ ಅಬ್ಬಿಗೇರಿ ಕೆರೆ ಲಿಲಾವು, ಕ್ಯಾದಿಗೆ ಲಿಲಾವು, ಮುಳಗುಂದ ಪಟ್ಟಣ ಪಂಚಾಯತಿ ವ್ಯಾಪ್ತಿಯ 6 ಶುದ್ಧ ಕುಡಿಯುವ ನೀರಿನ ಘಟಕ ನಿರ್ವಹಣೆಯ ಲಿಲಾವು, ಸಂತೆ ಕರ ಲಿಲಾವು, ಅನುಪಯುಕ್ತ ವಸ್ತುಗಳ ಲಿಲಾವುಗಳನ್ನು ಜುಲೈ 4ರಂದು ಬೆಳಿಗ್ಗೆ 11 ಗಂಟೆಗೆ ಮುಳಗುಂದ ಪಟ್ಟಣ ಪಂಚಾಯತ್ ಕಾರ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಹೆಚ್ಚಿನ ಮಾಹಿತಿ ಬೇಕಾದಲ್ಲಿ ಮುಳಗುಂದ ಪಟ್ಟಣ ಪಂಚಾಯತ ಮುಖ್ಯಾಧಿಕಾರಿಗಳ ಕಚೇರಿ ದೂ.ಸಂ. 08372-280128 ಸಂಪರ್ಕಿಸಬಹುದಾಗಿದೆ.



ಗದಗ ಜಿಲ್ಲಾ ಜೆಡಿಎಸ್ ವತಿಯಿಂದ ನೂತನವಾಗಿ ಲೋಕಸಭೆ ಚುನಾಯಿತರಾದ ಬಸವರಾಜ ಬೊಮ್ಮಾಯಿಯವರನ್ನು ಗದಗ ಜಿಲ್ಲಾ ಜೆಡಿಎಸ್ ಪಕ್ಷದ ವತಿಯಿಂದ ಸನ್ಮಾನಿಸಲಾಯಿತು. ಪಕ್ಷದ ಹಿರಿಯ ಮುಖಂಡರಾದ ಎಂ.ಎಸ್. ಪರ್ವತಗೌಡ್ರ, ಗದಗ ಜಿಲ್ಲಾ ಜೆಡಿಎಸ್ ಉಪಾಧ್ಯಕ್ಷ, ವಕೀಲರಾದ ಗಿರೀಶ ಸಂಶಿ, ಗದಗ ಶಹರ ಘಟಕದ ಅಧ್ಯಕ್ಷ ಪ್ರಫುಲ ಪುಣೇಕರ, ಮುಖಂಡರಾದ ಕೆ.ಎಫ್. ದೊಡ್ಡಮನಿ ವಕೀಲರು ಮತ್ತು ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ

# ಕಾರ್ಗಿಲ್ ವಿಜಯೋತ್ಸವಕ್ಕೆ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜುಲೈ 26ರಂದು ಕಾರ್ಗಿಲ್ ವಿಜಯೋತ್ಸವದ ಅಂಗವಾಗಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದಿಂದ ನಗರದ ಕಿತ್ತೂರು ರಾಣಿ ಚನ್ನಮ್ಮ ಸರ್ಕಲ್‌ನಿಂದ ಬಸವೇಶ್ವರ ವೃತ್ತ, ಹುಯಿಲಗೋಳ ನಾರಾಯಣರಾವ್ ವೃತ್ತ, ಗಾಂಧಿ ಸರ್ಕಲ್ ಮಾರ್ಗವಾಗಿ ಕೆ.ಎಚ್. ಪಾಟೀಲ್ ಸಭಾಭವನದವರೆಗೆ ಜಾಗೃತಿ ಮೆರವಣಿಗೆ ಆಯೋಜಿಸಲಾಗಿದೆ ಎಂದು ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ ಮಾಹಿತಿ ನೀಡಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಜಮ್ಮು-ಕಾಶ್ಮೀರದ ಕಾರ್ಗಿಲ್ ಪ್ರದೇಶದಲ್ಲಿ ಪಾಕಿಸ್ತಾನದ ಸೈನಿಕರನ್ನು ನಮ್ಮ ವೀರ ಯೋಧರು ಹಿಮ್ಮೆಟ್ಟಿಸಿ ಯುದ್ಧದಲ್ಲಿ ಜಯ ಸಾಧಿಸಿದ್ದರು. ಇದರ ಅಂಗವಾಗಿ ಜುಲೈ 26ರಂದು ದೇಶಾದ್ಯಂತ ಕಾರ್ಗಿಲ್ ವಿಜಯೋತ್ಸವ ಆಚರಿಸುವುದರ ಜೊತೆಗೆ ಯುದ್ಧದಲ್ಲಿ ಮಡಿದ ವೀರ ಯೋಧರಿಗೆ ಶ್ರದ್ಧಾಂಜಲಿ ಸಲ್ಲಿಸಲಾಗುತ್ತದೆ ಎಂದರು.

ಪ್ರತಿ ವರ್ಷ ಮಾಜಿ ಸೈನಿಕರು ಕಾರ್ಗಿಲ್ ವಿಜಯೋತ್ಸವವನ್ನು ನಗರದ ಹೃದಯ ಭಾಗದಲ್ಲಿರುವ ಗಾಂಧಿ ಸರ್ಕಲ್‌ನಲ್ಲಿ ಆಚರಿಸುತ್ತಾರೆ. ಆದರೆ ಈ ವಿಜಯೋತ್ಸವವನ್ನು ಬೀದಿ ನಾಟಕದ ರೀತಿ ಕೇವಲ ಮಾಜಿ ಸೈನಿಕರಷ್ಟೇ ಆಚರಿಸಬೇಕಾದ ಅನಿವಾರ್ಯತೆ ಇದೆ. ಯುವಕರು ವಿಜಯೋತ್ಸವದ ದಿನದಂದು ಕೇವಲ ತಮ್ಮ ವಾಟ್ಸಾಪ್ ಸ್ಟೇಟಸ್ ಮೂಲಕ ದೇಶಭಕ್ತಿ ತೋರಿಸುತ್ತಾರೆಯೇ ವಿನಃ ನಮ್ಮ ಜೊತೆ ಕೈಜೋಡಿಸುವುದಿಲ್ಲ ಎಂದು ಬಸಲಿಂಗಪ್ಪ ಮುಂಡರಗಿ ಸಾರ್ವಜನಿಕರ ಬಗ್ಗೆ ಬೇಸರ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಶಿವಪುತ್ರಪ್ಪ ಸಂಗನಾಳ, ವಿಜಯ ಬಡಿಗೇರ, ಮಲ್ಲಿಕಾರ್ಜುನ ಕೊರಕ್ಕನವರ, ಬೆಟ್ಟಪ್ಪ ಕುಂಬಾರ, ವೆಂಕಪ್ಪ ಕಲಹಾಳ, ಮಲ್ಲೇಶಪ್ಪ ಕೊಣ್ಣೂರ, ನಿಂಗಪ್ಪ ಚೊರಗತ್ತಿ, ಪ್ರಕಾಶ್ ಬಂಡಿಹಾಳ, ಸುಭಾಶ್ಚಂದ್ರ ಬಗರೆ, ಪ್ರವೀಣ ಹೂಗಾರ, ಮಂಗಲೇಶ್ ವಸ್ತ್ರದ, ಚಂದ್ರಶೇಖರಪ್ಪ ಬಿಳೆಯಲಿ, ಸಿದ್ದಲಿಂಗಪ್ಪ ಪಾಳೇದ, ಸಂಗಪ್ಪ ತಳವಾರ, ದಾವಲ್ ಅಂಗಡಿ ಸೇರಿದಂತೆ ಮಾಜಿ ಸೈನಿಕರು ಉಪಸ್ಥಿತರಿದ್ದರು.




### ಸಾಮಾಜಿಕ ಕಾರ್ಯಕ್ರಮಕ್ಕೂ ಸೈ

ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘ ಕೇವಲ ತಮ್ಮ ಒಳಿತಿಗಾಗಿ ಹೋರಾಟ ಮಾಡುತ್ತಿಲ್ಲ. ಬದಲಾಗಿ ಕಳೆದ 2-3 ವರ್ಷಗಳಿಂದ ಸ್ವಚ್ಛತಾ ಅಭಿಯಾನ, ಸಸಿ ನೆಡುವ ಕಾರ್ಯಕ್ರಮ, ವನ ಮಹೋತ್ಸವ ಕಾರ್ಯಕ್ರಮ ಸೇರಿದಂತೆ ಹಲವಾರು ಸಾಮಾಜಿಕ ಕಾರ್ಯಗಳನ್ನು ಮಾಡಿಕೊಂಡು ಬಂದಿದ್ದು, ಗದಗ ಜಿಲ್ಲೆಯನ್ನು ಮಾದರಿ ಜಿಲ್ಲೆಯನ್ನಾಗಿ ಮಾಡುವ ಸಂಕಲ್ಪ ಹೊಂದಿದೆ ಎಂದು ಬಸಲಿಂಗಪ್ಪ ಮುಂಡರಗಿ ತಿಳಿಸಿದರು.

ಒಬ್ಬ ಯೋಧ ಸುಮಾರು 18ರಿಂದ 25 ವರ್ಷಗಳವರೆಗೆ ತನ್ನ ಇಡೀ ಕುಟುಂಬವನ್ನು ಬಿಟ್ಟು ದೇಶ ರಕ್ಷಣೆಗಾಗಿ ಹೋರಾಟ ನಡೆಸಿ, ನಿವೃತ್ತಿಯ ನಂತರ ವಾಪಸ್ ಆಗುತ್ತಾನೆ. ನಂತರ ಅವನು ಉದ್ಯೋಗಕ್ಕಾಗಿ ಬೇರೆ ಜಿಲ್ಲೆಗಳಿಗೆ ಹೋಗುವ ಅನಿವಾರ್ಯತೆ ಇರುತ್ತದೆ. ಈಗಾಗಲೇ ಕುಟುಂಬ ಬಿಟ್ಟು ದೇಶ ಸೇವೆ ಮಾಡಿ ಬಂದ ಯೋಧ ನಿವೃತ್ತಿ ನಂತರವೂ ಕುಟುಂಬದ ಜೊತೆ ಕಾಲ ಕಳೆಯಲು ಸಾಧ್ಯವಾಗದು. ಹಾಗಾಗಿ, ನಿವೃತ್ತ ಯೋಧರಿಗೆ ಸ್ವಂತ ಜಿಲ್ಲೆಯಲ್ಲಿಯೇ ಕೆಲಸ ನೀಡುವುದರಿಂದ ಅವರ ಕುಟುಂಬದ ಜೊತೆ ಕಾಲ ಕಳೆಯಲು ಸಹಕಾರಿಯಾಗುತ್ತದೆ.

- ಎನ್.ಆರ್. ದೇವಾಂಗಮಠ.
ಮಾಜಿ ಸೈನಿಕರ ಸಂಘದ ಉಪಾಧ್ಯಕ್ಷರು.

### ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ತೆರವಾದ ಹುದ್ದೆಗಳ ಭರ್ತಿಗೆ ಅನುಮತಿ ಪಡೆಯಲು ಹೋರಾಟ

# ಶಿಕ್ಷಣದ ಗುಣಮಟ್ಟದ ಮೇಲೆ ಪರಿಣಾಮ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಳೆದ 9 ವರ್ಷಗಳಿಂದ ನಿವೃತ್ತಿ, ನಿಧನದಿಂದ ಖಾಲಿಯಾದ ಹುದ್ದೆಗಳನ್ನು ತುಂಬಲು ಸರಕಾರ ಅನುಮತಿ ನೀಡಿಲ್ಲ. ಇದರಿಂದ ಶಿಕ್ಷಣದ ಗುಣಮಟ್ಟದ ಮೇಲೆ ಪರಿಣಾಮ ಬೀರಿದೆ. ಈ ಹಿನ್ನೆಲೆಯಲ್ಲಿ ನಿವೃತ್ತಿಯಿಂದ ಖಾಲಿ ಆದ ಹುದ್ದೆಗಳನ್ನು ತುಂಬಲು ಸರಕಾರದ ಅನುಮತಿ ಪಡೆಯಲು ಹೋರಾಟ ಮಾಡಲು ನಿರ್ಧರಿಸಲಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ತಿಳಿಸಿದ್ದಾರೆ.

ನಗರದ ನೀರಿಕ್ಷಣಾ ಮಂದಿರದಲ್ಲಿ ಮಾಜಿ ಸಚಿವ ಎಸ್.ಎಸ್. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಜಿಲ್ಲಾ ಮಟ್ಟದ ಖಾಸಗಿ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿ ಹಾಗೂ ನೌಕರರ ಸಂಘಟನೆಗಳ ಪದಾಧಿಕಾರಿಗಳ ಜೊತೆಗೆ ಚರ್ಚಿಸಿ ರಾಜ್ಯ ಮಟ್ಟದಲ್ಲಿ ಹೋರಾಟ ಮಾಡಲು ನಿರ್ಧರಿಸಲಾಯಿತು.

ಜುಲೈ 3ನೇ ವಾರದಲ್ಲಿ ನಡೆಯುವ ಅಧಿವೇಶನದಲ್ಲಿ ಮುಖ್ಯಮಂತ್ರಿಗಳಿಗೆ ಹಾಗೂ ಶಿಕ್ಷಣ ಸಚಿವರಿಗೆ ಮನವಿ ಸಲ್ಲಿಸಲು ನಿರ್ಧರಿಸಲಾಯಿತು. ಇದಕ್ಕೆ ಸರಿಯಾದ ಪ್ರತಿಕ್ರಿಯೆ ಬರದಿದ್ದರೆ ಹಂತ ಹಂತವಾಗಿ ಹೋರಾಟ ಮಾಡಲು ತೀರ್ಮಾನಿಸಲಾಯಿತು.

ಸಭೆಯಲ್ಲಿ ಗದಗ ಜಿಲ್ಲೆಯ ವಿವಿಧ ಅನುದಾನಿತ ಶಿಕ್ಷಣ ಸಂಸ್ಥೆಗಳ ಪದಾಧಿಕಾರಿಗಳಾದ ಎಸ್.ಎಸ್. ದೇಸಾಯಿ, ಹೆಚ್.ಕೆ. ದಾಸರ, ಎಂ.ಡಿ. ಬಟ್ಟೂರ, ಬಿ.ಎಸ್. ಹಿರೇಮಠ, ವಿ.ಬಿ. ಶೇಷಗಿರಿ, ಪ್ರಾಚಾರ್ಯರಾದ ಅಶೋಕ ಅಂಗಡಿ, ಈರಣ್ಣ ಹಾದಿಮನಿ, ಜಿ.ಬಿ. ಗುಡಿಮನಿ ಹಾಗೂ ಶಿಕ್ಷಕರ ಸಂಘಟನೆಯ ಪದಾಧಿಕಾರಿಗಳಾದ ಎಸ್.ಎಸ್. ಸೋಮಣ್ಣವರ, ವಾಯ್.ಸಿ. ಪಾಟೀಲ, ಪಿ.ಎಚ್. ಕಡಿವಾಳ, ನಾಗರಳ್ಳಿ, ಎಮ್.ಕೆ. ಲಮಾಣಿ, ಎ.ಎಸ್. ಪಾಟೀಲ, ಮುಂತಾದವರು ಉಪಸ್ಥಿತರಿದ್ದರು. ಪ್ರಾಚಾರ್ಯರ ಸಂಘದ ಅಧ್ಯಕ್ಷ ಎಮ್.ಸಿ. ಕಟ್ಟಿಮನಿ ವಂದಿಸಿದರು.



ಜುಲೈ 15ರ ಒಳಗಾಗಿ ಹುಬ್ಬಳ್ಳಿಯಲ್ಲಿ ರಾಜ್ಯಮಟ್ಟದ ಹೋರಾಟ ಸಮಿತಿ ರಚನೆ ಮಾಡಲು ಸಭೆಯನ್ನು ಕರೆಯಲು ನಿರ್ಣಯಿಸಲಾಯಿತು. ಸಭೆಗೆ ಕೆ.ಎಲ್.ಇ ಸಂಸ್ಥೆ ಬೆಳಗಾವಿ, ಬಿ.ಎಲ್.ಡಿ ಸಂಸ್ಥೆ ವಿಜಯಪುರ, ಬಸವೇಶ್ವರ ವಿದ್ಯಾ ಸಂಸ್ಥೆ ಬಾಗಲಕೋಟೆ, ಕನಕದಾಸ ಶಿಕ್ಷಣ ಸಮಿತಿ ಗದಗ, ತೋಂಟದಾರ್ಯ ವಿದ್ಯಾಪೀಠ ಗದಗ, ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿ ನರೇಗಲ್ಲ, ಜಗದ್ಗುರು ಅನ್ನದಾನೇಶ್ವರ ವಿದ್ಯಾ ಸಮಿತಿ ಮುಂಡರಗಿ ಹೀಗೆ ಉಳಿದ ಎಲ್ಲ ಸಂಸ್ಥೆಗಳ ಆಡಳಿತ ಮಂಡಳಿಯ ಮುಖ್ಯಸ್ಥರನ್ನು ಹಾಗೂ ಎಲ್ಲ ನೌಕರರ ಸಂಘದ ಪದಾಧಿಕಾರಿಗಳನ್ನು ಆಹ್ವಾನಿಸಲು ನಿರ್ಧರಿಸಲಾಯಿತು.

## ಬಸ್ ನಿಲ್ದಾಣದಲ್ಲಿ ಸ್ವಚ್ಛತೆ ಮರೀಚಿಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಗೋವನಾಳ ಗ್ರಾಮದಲ್ಲಿ ಅಲ್ಲಲ್ಲಿ ಕಂಡುಬರುವ ಕಸದ ರಾಶಿ, ಸರಾಯಿ ಪಾಕೀಟುಗಳ ರಾಶಿ ಕಣ್ಣಿಗೆ ರಾಚುವಂತಿದ್ದು, ನಿರ್ವಹಣೆ ಕೊರತೆಯಿಂದ ಜನರು ಆಡಳಿತವನ್ನು ಶಪಿಸುವಂತಾಗಿದೆ.

ಮುಖ್ಯ ರಸ್ತೆಗೆ ಹೊಂದಿಕೊಂಡಿರುವ ಗ್ರಾಮದ ಬಸ್ ತಂಗುದಾಣದಲ್ಲಿ ನಿತ್ಯ ಹಲವಾರು ಜನರು ಕುಡಿತಕ್ಕಾಗಿ ಕುಳಿತುಕೊಳ್ಳಲು ಉಪಯೋಗಿಸುತ್ತಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ನಿತ್ಯ ಬೇರೆಡೆಯಿಂದ ತಂದ ಮದ್ಯದ ಟೆಟ್ರಾ ಪಾಕೀಟುಗಳನ್ನು ಖಾಲಿ ಜಾಗೆಗಳಲ್ಲಿ, ಬಸ್ ನಿಲ್ದಾಣ, ಕುಡಿಯುವ ನೀರಿನ ಘಟಕ, ಶಾಲಾ ಮೈದಾನ ಇತ್ಯಾದಿಗಳಲ್ಲಿ ಕುಡಿದು ಅಲ್ಲಿಯೇ ಎಸೆದು ಹೋಗುತ್ತಿರುವದು ಕಂಡು ಬರುತ್ತಿದೆ.

ಈ ಬಸ್ ತಂಗುದಾಣದ ನಿರ್ವಹಣೆ ಮಾಡಲು ಗ್ರಾ.ಪಂ ಯಾವುದೇ ಸರಿಯಾದ ಕ್ರಮಗಳನ್ನು ಕೈಗೊಳ್ಳದಿರುವದು ಗ್ರಾಮಸ್ಥರ ಅಸಮಾಧಾನಕ್ಕೆ ಕಾರಣವಾಗಿದೆ. ಗ್ರಾ.ಪಂನಲ್ಲಿ ಮೊದಲು ಸ್ವಚ್ಛತೆಗಾಗಿ ಕಾರ್ಮಿಕರನ್ನು ನೇಮಿಸಿಕೊಂಡಿದ್ದರು. ಆದರೆ ಕಾರಣಾಂತರಗಳಿಂದ ಅವರು ಈ ಕಾರ್ಯವನ್ನು ಬಿಟ್ಟು ಹೋಗಿರುವದರಿಂದ ಗ್ರಾಮದಲ್ಲಿ ಸ್ವಚ್ಛತೆ ಮರೀಚಿಕೆಯಾಗಿದೆ. ಗ್ರಾ.ಪಂನಿಂದ 10-15 ದಿನಗಳಿಗೆ ಒಮ್ಮೆ ಕೂಲಿಯಾಳುಗಳಿಂದ ಸ್ವಚ್ಛತೆಯನ್ನು ಮಾಡಿಸುತ್ತಿದ್ದಾರೆ ಎನ್ನಲಾಗುತ್ತಿದೆ.

ಇಂತಹ ಮುಖ್ಯ ಸ್ಥಳದಲ್ಲಿ ಈ ರೀತಿ ಕಸ ಸಂಗ್ರಹವಾಗುತ್ತಿರುವದು ಅಸಹ್ಯ ಮೂಡಿಸುವಂತಿದೆ. ಈ ಕುರಿತಂತೆ ಗ್ರಾ.ಪಂ ಆಡಳಿತ ಮಂಡಳಿ ವಿಶೇಷ ಕಾಳಜಿವಹಿಸಿ, ಗ್ರಾಮದ ಸ್ವಚ್ಛತೆಗೆ ಕಾರ್ಯಕ್ಕೆ ಆದ್ಯತೆ ನೀಡಲಿ ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.




### 'ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ' ಕಾರ್ಯಕ್ರಮದಲ್ಲಿ ತೋಂ. ಸಿದ್ಧರಾಮ ಮಹಾಸ್ವಾಮಿಗಳು

## ವಚನಗಳ ಸಾರದೊಂದಿಗೆ ಉತ್ತಮ ಸಮಾಜ ನಿರ್ಮಾಣವಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಯುವಜನಾಂಗ ವಚನ ಸಾಹಿತ್ಯದ ತತ್ವಗಳನ್ನು ಅರಿತು, ನಿತ್ಯ ಜೀವನದಲ್ಲಿ ಅಳವಡಿಸಿಕೊಂಡು ಕಾಯಕ, ದಾಸೋಹ ಸಿದ್ಧಾಂತಗಳಡಿ ನವ ಸಮಾಜ ನಿರ್ಮಾಣವಾಗಬೇಕು ಎಂದು ತೋಂಟದಾರ್ಯ ಸಂಸ್ಥಾನಮಠದ ಜಗದ್ಗುರು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

ನಗರದ ಶ್ರೀ ಜಗದ್ಗುರು ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಡಾ. ಫ.ಗು. ಹಳಕಟ್ಟಿಯವರ ಜನ್ಮದಿನದ ನಿಮಿತ್ತ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಸಂಶೋಧಕ ಮತ್ತು ಸಾಹಿತ್ಯ ಪ್ರಚಾರಕರಾದ ಡಾ.ಫ.ಗು ಹಳಕಟ್ಟಿಯವರು ವಕೀಲ ವೃತ್ತಿ ನಿರ್ವಹಿಸುತ್ತಿದ್ದರು. ಅವರ ವಚನ ಸಾಹಿತ್ಯದ ಮೇಲಿನ ಕಾಳಜಿಯಿಂದ ಇಡೀ ರಾಜ್ಯಾದ್ಯಂತ ಅಲೆದಾಡಿ 12ನೇ ಶತಮಾನದ ಅನೇಕ ವಚನಗಳನ್ನು ಸಂಗ್ರಹಿಸಿ ವಚನ ಸಾಹಿತ್ಯವನ್ನು ಶಾಶ್ವತವಾಗಿ ಉಳಿಸುವಲ್ಲಿ ಪಾತ್ರ ವಹಿಸಿದರು. ಬ್ರಿಟಿಷ್‌ರ ಕಾಲದಲ್ಲಿ ಕನ್ನಡದ ಅತ್ಯಮೂಲ್ಯ ವಚನ ಸಾಹಿತ್ಯವನ್ನು ಪ್ರಕಟಿಸುವುದು ಸುಲಭ ಕಾರ್ಯವಾಗಿರಲಿಲ್ಲ. ಅವರಿಗೆ ಎದುರಾದ ಅಡೆ-ತಡೆಗಳನ್ನು ಎದುರಿಸಿ ಸಂಗ್ರಹಿಸಿದ ವಚನಗಳನ್ನು ಮುದ್ರಿಸಲು ತಮ್ಮ ಸ್ವಂತ ಮನೆಯನ್ನು ಮಾರಿರುವುದು ಅವರ ದೃಢವಾದ ಇಚ್ಛಾಶಕ್ತಿಯನ್ನು ತಿಳಿಸುತ್ತದೆ ಎಂದರು.

ಕೇವಲ ಪುಸ್ತಕಕ್ಕೆ ಸೀಮಿತವಾಗದೆ ಪ್ರತಿಯೊಬ್ಬರ ಮನೆಮನೆಗೆ ತಲುಪುವ ಕಾರ್ಯವಾಗಬೇಕು. ಯುವ ಜನಾಂಗದ ವಚನ ಸಾಹಿತ್ಯವನ್ನು ಅರಿತು ತಮ್ಮ ಜೀವನವನ್ನು ಕಟ್ಟಿಕೊಳ್ಳುವುದರ ಜೊತೆಗೆ ಉತ್ತಮ ಸಮಾಜ ನಿರ್ಮಾಣ ಮಾಡುವ ಕಾರ್ಯವಾಗಬೇಕು ಎಂದು ಜಗದ್ಗುರು ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಕಾರ್ಯಕ್ರಮವನ್ನು ಉದ್ಘಾಟಿಸಿ, ವಚನ ಸಾಹಿತ್ಯ ದಿನಾಚರಣೆಯ ಶುಭಾಶಯ ಕೋರಿ ಮಾತನಾಡಿ, ಕನ್ನಡ ಸಾಹಿತ್ಯದಲ್ಲಿ ವಚನ ಸಾಹಿತ್ಯವು ಜನ ಸಾಮಾನ್ಯರ ಜೀವನ ಕಟ್ಟುವಲ್ಲಿ ಮಹತ್ತರ ಪಾತ್ರವನ್ನು ವಹಿಸಿದೆ. ಇಂತಹ ವಚನಗಳನ್ನು ಶ್ರಮವಹಿಸಿ ಸಂಗ್ರಹಿಸಿದ ಫ.ಗು. ಹಳಕಟ್ಟಿಯವರ ಕಾರ್ಯ ಶ್ಲಾಘನೀಯವಾದದ್ದು. ಅರ್ಥಪೂರ್ಣ, ಅತ್ಯಮೂಲ್ಯ ವಚನಗಳನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು.

ವಿಜಯಪುರದ ಸಂಶೋಧನಾ ಕೇಂದ್ರದ ಕಾರ್ಯದರ್ಶಿ ಡಾ. ಎಂ.ಎಸ್. ಮದಬಾವಿ ಉಪನ್ಯಾಸ ನೀಡುತ್ತ, ಡಾ. ಫ.ಗು. ಹಳಕಟ್ಟಿಯವರು ಧಾರವಾಡದಲ್ಲಿ ಹುಟ್ಟಿ ವಿದ್ಯಾಭ್ಯಾಸ ಮುಗಿಸಿದ ನಂತರ ವಿಜಾಪುರದಲ್ಲಿ ತಮ್ಮ ವಕೀಲ ವೃತ್ತಿ ಪ್ರಾರಂಭಿಸಿದರು. ವಚನ ಸಾಹಿತ್ಯದ ಮೇಲಿನ ಅಪಾರ ಆಸಕ್ತಿಯಿಂದ ತಾಳೆಗರಿಯ ಪ್ರಾಚೀನ ಗ್ರಂಥಗಳನ್ನು ಸಂಪಾದಿಸಲು ಪ್ರಾಂಭಿಸಿ ವಚನ ಸಾಹಿತ್ಯವನ್ನು ಉಳಿಸಲು ಪಣತೊಟ್ಟರು. ಅವರು ಮಾಡಿದ ಮಹತ್ಕಾರ್ಯವನ್ನು ಇತಿಹಾಸ ನೆನಪಿಡುವಂತದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ಗಣ್ಯರು ಹಾಜರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಸ್ವಾಗತಿಸಿದರು. ಮೃತ್ಯುಂಜಯ ಹಿರೇಮಠ ಮತ್ತು ತಂಡದವರು ವಚನ ಸಂಗೀತ ಪ್ರಸ್ತುತ ಪಡಿಸಿದರು. ಪ್ರೊ. ಆರ್.ಬಿ. ಚಿನಿವಾಲರ ಕಾರ್ಯಕ್ರಮ ನಿರೂಪಿಸಿದರು.



ಹಳಕಟ್ಟಿಯವರು 1926ರಲ್ಲಿ ಬಳ್ಳಾರಿಯಲ್ಲಿ ನಡೆದ 12ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದರು. 1928ರ ಜೂನ್‌ನಲ್ಲಿ ನಡೆದ ಕರ್ನಾಟಕ ಏಕೀಕರಣ ಪರಿಷತ್ತಿನ 3ನೇ ಅಧ್ಯಕ್ಷ ಪದವಿ ಗೌರವ, ಕರ್ನಾಟಕ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್, ಬ್ರಿಟಿಷ್ ಸರಕಾರದಿಂದ ರಾವ್ ಬಹದ್ದೂರ್ ಮತ್ತು ರಾವ್ ಸಾಹೇಬ ಪ್ರಶಸ್ತಿ, ವಚನ ಶಾಸ್ತ್ರ ಪ್ರವೀಣ, ವಚನ ಶಾಸ್ತ್ರ ಪಿತಾಮಹ ಮುಂತಾದ ಗೌರವಗಳಿಗೆ ಪಾತ್ರರಾದವರು ಎಂದು ಫ.ಗು. ಹಳಕಟ್ಟಿಯವರ ಜೀವನ ಮತ್ತು ಸಾಧನೆಯ ಪ್ರಮುಖ ವಿಷಯಗಳ ಕುರಿತು ಡಾ. ಎಂ.ಎಸ್. ಮದಬಾವಿ ಉಪನ್ಯಾಸ ನೀಡಿದರು.

## ಸಂಪಾದಕೀಯ

# ಅಭಿವೃದ್ಧಿ ಮರೆತ ಕಾಂಗ್ರೆಸ್

ಪಂಚ ಗ್ಯಾರಂಟಿ ಯೋಜನೆಗಳ ಮೇಲೆ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಈಗ ಅಭಿವೃದ್ಧಿಯನ್ನು ನಿರ್ಲಕ್ಷಿಸುತ್ತಿದೆ. ಅಧಿಕಾರಕ್ಕೆ ಬರತ್ತಿದ್ದಂತೆ ಒಂದೊಂದಾಗಿ ಗ್ಯಾರಂಟಿ ಯೋಜನೆಗಳನ್ನ ಅನುಷ್ಠಾನಗೊಳಿಸಿ, ರಾಜ್ಯದ ಜನರ ಗಮನ ಸೆಳೆದಿತ್ತು. ನುಡಿದಂತೆ ನಡೆದ ಸರ್ಕಾರ ಎನ್ನುವ ಹಿರಿಮೆಗೂ ಪಾತ್ರವಾಗಿತ್ತು.

ಆದರೆ ಲೋಕಸಭೆ ಚುನಾವಣೆಯಲ್ಲಿ ಗ್ಯಾರಂಟಿ ಕಾರ್ಯಕ್ರಮಗಳು ಕೈ ಹಿಡಿಯದಿರುವ ಕಾರಣಕ್ಕೆ ಕಾಂಗ್ರೆಸ್ ಅಭಿವೃದ್ಧಿ ವಿಷಯದಲ್ಲಿ ಉದಾಸೀನ ಮಾಡುತ್ತಿದೆ. ಒಂದು ಕಡೆ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ, ಹಾಲಿನ ದರವನ್ನ ತುಸು ಹೆಚ್ಚಳ ಮಾಡಲಾಗಿದೆ. ಇದೆಲ್ಲದಕ್ಕಿಂತ ಮುಖ್ಯವಾಗಿ ಉಪಮುಖ್ಯಮಂತ್ರಿಯ ಹುದ್ದೆ ವ್ಯಾಪಕ ಚರ್ಚೆಗೆ ಕಾರಣವಾಗುತ್ತಿದೆ.

ಜಾತಿಗೊಂದು ಉಪಮುಖ್ಯಮಂತ್ರಿ ಹುದ್ದೆ, ಕೊಡಬೇಕು ಎನ್ನುವ ಕೂಗು ಆಡಳಿತ ಪಕ್ಷದ ಶಾಸಕರಿಂದ ವ್ಯಕ್ತವಾಗಿದೆ. ಆದರೆ ಅದಕ್ಕಿಂತ ಮುಖ್ಯವಾಗಿ ಮುಖ್ಯಮಂತ್ರಿಯನ್ನೇ ಬದಲಾಯಿಸಬೇಕು ಎನ್ನುವ ಚರ್ಚೆ ಶುರುವಾಗಿದ್ದು ಕಾಂಗ್ರೆಸ್ ವಲಯದಲ್ಲಿ ಸಂಚಲನ ಸೃಷ್ಟಿಗೆ ಕಾರಣವಾಗಿದೆ.

ಅಧಿಕಾರ ರಾಜಕಾರಣದಲ್ಲಿ ಮುಳಗಿ ಹೋಗಿರುವ ಕಾಂಗ್ರೆಸ್ ಸಚಿವರು, ಶಾಸಕರು ಅಭಿವೃದ್ಧಿ ಮರೆತಿದ್ದಾರೆ. ತಾವು ಪ್ರತಿನಿಧಿಸುವ ಕ್ಷೇತ್ರವನ್ನು ಬಿಟ್ಟು ಬೆಂಗಳೂರಿನಲ್ಲಿ ಬೀಡು ಬಿಟ್ಟಿದ್ದಾರೆ. ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕಾದ ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲೆಗಳತ್ತ ಮುಖ ಮಾಡುತ್ತಿಲ್ಲ.

ಪ್ರತಿಯೊಬ್ಬ ಜಿಲ್ಲಾ ಉಸ್ತುವಾರಿ ಸಚಿವರು ತಮ್ಮ ತಮ್ಮ ಜಿಲ್ಲೆಯಲ್ಲಿ ಜನಸ್ಪಂದನ ಸಭೆ ನಡೆಸಿ, ಜನರ ಸಮಸ್ಯೆಗಳಿಗೆ ಅಲ್ಲಿಯೇ ಪರಿಹಾರ ಕೊಡುವ ಕೆಲಸವನ್ನ ಆರಂಭದಲ್ಲಿ ಮಾಡಿದ್ದರು. ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲೂ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಜನಸ್ಪಂದನ ಸಭೆಯೂ ನಡೆಯಿತು. ಅನೇಕ ಸಮಸ್ಯೆಗಳಿಗೆ ಆ ಸಭೆ ಪರಿಹಾರ ಕೊಡುವ ವೇದಿಕೆಯಾಗಿಯೂ ಜನಮನ್ನಣೆ ಗಳಿಸಿತು.

ಆದರೆ ಲೋಕಸಭೆ ಚುನಾವಣೆಯ ನಂತರ ಒಂದಿಬ್ಬರು ಸಚಿವರು ಜನರ ಅಹವಾಲು ಸ್ವೀಕರಿಸಿದ್ದು ಬಿಟ್ಟರೆ ಸರ್ಕಾರ ನಡೆಸುವಂತಹ ಅಧಿಕೃತ ಜನಸ್ಪಂದನ ಸಭೆಯನ್ನೇ ನಡೆಸಿಲ್ಲ. ಜನರ ಸಮಸ್ಯೆಗಳಿಗೆ ನೇರವಾಗಿ ದನಿಯಾಗಬೇಕಿದ್ದ ಜನಪ್ರತಿನಿಧಿಗಳು ಜನರಿಂದ ದೂರವಾಗಿದ್ದಾರೆ. ಅಭಿವೃದ್ಧಿಯನ್ನ ಸಂಪೂರ್ಣವಾಗಿ ನಿರ್ಲಕ್ಷಿಸಿದ್ದಾರೆ. ಆಡಳಿತರೂಢ ಕಾಂಗ್ರೆಸ್ ಪಕ್ಷ ಎಚ್ಚೆತ್ತುಕೊಳ್ಳದಿದ್ದರೆ, ಜನ ತಕ್ಕ ಪಾಠ ಕಲಿಸುವುದು ನಿಶ್ಚಿತ.

## ಯೋಗ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಯೋಗ ಶಿಬಿರ ಸಮಾರೋಪ

# ಕುಟುಂಬಸ್ಥರ ಆರೋಗ್ಯ ಮಹಿಳೆಯರ ಕೈಯಲ್ಲಿ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಅಡುಗೆ ತಯಾರಿಸುವ ಆ ಕುಟುಂಬದ ಮಹಿಳೆಯ ಕೈಯಲ್ಲಿಯೇ ಇಡೀ ಕುಟುಂಬದ ಸದಸ್ಯರ ಆರೋಗ್ಯ ಅಡಗಿರುತ್ತದೆ. ಈ ದಿಸೆಯಲ್ಲಿ ಅಡುಗೆ ಮನೆಯೇ ಔಷದಾಲಯ, ಅಡುಗೆ ತಯಾರಿಸುವ ಮಹಿಳೆಯೇ ವೈದ್ಯೆ ಎಂದು ಗದಗ ಡಿ.ಜಿ.ಎಂ. ಆರ್ಯುರ್ದೀಕ್ ಮಹಾವಿದ್ಯಾಲಯದ ಸ್ತ್ರೀರೋಗ ತಜ್ಞೆ ಡಾ. ಸುವರ್ಣ ನಿಡಗುಂದಿ ಅಭಿಪ್ರಾಯಪಟ್ಟರು.

ಇಲ್ಲಿಯ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ಶಾಖೆಯಲ್ಲಿ ಶಿವ-ಪಾರ್ವತಿ ಯೋಗ ಫೌಂಡೇಶನ್ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡಿದ್ದ ಯೋಗ ಶಿಬಿರ ಸಮಾರೋಪ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡುತ್ತಿದ್ದರು.

ಮಹಿಳೆಯು ಇಡೀ ಕುಟುಂಬದ ಉತ್ತಮ ಆರೋಗ್ಯ ಸ್ತಂಭವಾಗಿದ್ದಾಳೆ. ಹೀಗಾಗಿ, ಅಡುಗೆ ಮನೆಯೇ ಔಷಧಾಲಯವಾಗಿದ್ದು, ಅಲ್ಲಿ ಪ್ರತೀ ಆಹಾರ ಪದಾರ್ಥಗಳು ಔಷಧಿಯ ಗುಣಗಳನ್ನು ಹೊಂದಿರುತ್ತವೆ. ಅಡುಗೆಯನ್ನು ತಯಾರಿಸುವ ಮಹಿಳೆಯು ಸಮರ್ಪಕವಾಗಿ ಪದಾರ್ಥಗಳನ್ನು ಬಳಸಿ ಆಹಾರ ತಯಾರಿಸಿ ಕುಟುಂಬಸ್ಥರಿಗೆ ಬಡಿಸುತ್ತಾಳೆ. ಮಹಿಳೆಯು ಮನೆಗೆಲಸದ ಜೊತೆ ತಾನು ಸಮಯಕ್ಕೆ ಸರಿಯಾಗಿ ಆಹಾರ ಪಡೆಯಿದಿದ್ದರೆ ಅನಾರೋಗ್ಯಕ್ಕೀಡಾಗುತ್ತಾಳೆ. ಇದರಿಂದ ಇಡೀ ಮನೆಯ ಆರೋಗ್ಯವೂ ಕೆಡಬಹುದು. ಆದ್ದರಿಂದ, ಈ ಸಲ ಮಹಿಳಾ ಸಬಲೀಕರಣಕ್ಕಾಗಿ ಯೋಗ ದಿನಾಚರಣೆ ಆಚರಿಸಿದ್ದು, ಮಹಿಳೆಯರು ದಿನ ನಿತ್ಯ ಯೋಗ ಅಭ್ಯಾಸದಲ್ಲಿ ತೊಡಗಿಕೊಳ್ಳಬೇಕೆಂದರು.

ಮುಖ್ಯ ಅಥಿತಿ ಡಿ.ಜಿ.ಎಂ. ಆರ್ಯುರ್ದೀಕ್ ಮಹಾವಿದ್ಯಾಲಯದ ಯೋಗ ವಿಭಾಗದ ಪ್ರಾಚಾರ್ಯ ಡಾ. ಎಸ್.ಎಸ್. ಹಿರೇಮಠ ಮಾತನಾಡಿ, ಯೋಗ ಸಾಧನೆಯ ವಿಜ್ಞಾನವೇ ಹೊರತು ಭೋದನೆಯ ವಿಜ್ಞಾನ ಅಲ್ಲ. ಯೋಗ ಅನ್ನುವುದು ಕೂಡಿಸುವುದು ಮತ್ತು ಅನುಭವಿಸುವುದು. ಯೋಗ ದೈಹಿಕ, ಮಾನಸಿಕ, ಸಾಮಾಜಿಕ, ಮತ್ತು ಆಧ್ಯಾತ್ಮಿಕವಾಗಿ ಸದೃಢಗೊಳಿಸುತ್ತದೆ. ಔಷಧ ಇರಲಾರದೇ ಚಿಕಿತ್ಸೆ ಕೊಡುವ ವಿಶ್ವ ವಿಶಿಷ್ಠ ಈ ಯೋಗ ಪದ್ಧತಿ ವಿಶ್ವದಲ್ಲಿಯೇ ಪ್ರಸಿದ್ಧವಾಗಿದೆ. ಕಾರಣ ಯೋಗ, ಆರ್ಯುವೇದ, ಸಂಸ್ಕೃತಿ, ಸಂಪ್ರದಾಯಗಳನ್ನು ಇಡೀ ಜಗತ್ತೇ ಮೆಚ್ಚಿಕೊಂಡಿದೆ.

ಜೂನ್ 21ರಂದು ಜಗತ್ತಿನ 196 ರಾಷ್ಟ್ರಗಳು ಒಂದೇ ಸಮಯಕ್ಕೆ ಯೋಗ ಆಯಾಮಗಳನ್ನು ಮಾಡುವದರೊಂದಿಗೆ ಯೋಗ ದಿನವನ್ನು ಆಚರಿಸುತ್ತಿರುವುದು ಹೆಮ್ಮೆಯ ಸಂಗತಿ. ಆದ್ದರಿಂದ ತಾನು ಮಾತ್ರ ಯೋಗವನ್ನು ರೂಢಿಸಿಕೊಳ್ಳದೇ ನಮ್ಮ ಸುತ್ತಮುತ್ತಲಿನವರಿಗೂ ಸಹ ಯೋಗದ ಮಹತ್ವವನ್ನು ಹೇಳಿ ಆರೋಗ್ಯವಂತ ಸಮಾಜವನ್ನು ಕಟ್ಟಬೇಕಾಗಿದೆ ಎಂದರು.

ಅಂಗನವಾಡಿ ಮೇಲ್ವಿಚಾರಕಿ ಶಾಹೀದಬೇಗಂ ಹತ್ತಿವಾಲೆ ಮಹಿಳಾ ಕಾನೂನು ಮತ್ತು ಪೌಷ್ಠಿಕತೆಯ ಬಗ್ಗೆ ವಿವರಿಸಿದರು. ಅಧ್ಯಕ್ಷತೆ ವಹಿಸಿದ್ದ ಬ್ರಹ್ಮಕುಮಾರಿ ಸರೋಜಾಕ್ಕನವರು ಆತ್ಮ ಮತ್ತು ಪರಮಾತ್ಮನ ಇರುವಿಕೆಯ ಕುರಿತು ತಿಳಿಸಿದರು. ರೋಟರಿ ಬೆಂಗಳೂರು ಗ್ಲೋಬಲ್ ಯೋಗ ಸಮಿತ್ ಇವರು ತರಬೇತುದಾರ, ಯೋಗ ಸಾಧಕ ಸಿದ್ದಣ್ಣ ಜವಳಿ ಅವರು 30 ವರ್ಷಗಳ ಕಾಲ ಯೋಗ ತರಬೇತಿ ನೀಡಿದ್ದಕ್ಕಾಗಿ 'ಯಶಸ್ವಿ ಯೋಗಿ' ಪ್ರಶಸ್ತಿ ನೀಡಿದ್ದು, ಈ ಸಂದರ್ಭದಲ್ಲಿ ಅವರನ್ನು ಸನ್ಮಾನಿಸಲಾಯಿತು.

ಶಿಬಿರಾರ್ಥಿಗಳು ತಮ್ಮ ಅನಿಸಿಕೆ ಹಂಚಿಕೊಂಡರು. ಕವಿತಾ ಬಡಿಗೇರ ಪ್ರಾರ್ಥಿಸಿದರು. ಸಂಗಮೇಶ ತಿಮ್ಮಾಪೂರ ಸ್ವಾಗತಿಸಿದರು. ವಿ.ಸಿ. ಕುಂಬಾರ ನಿರೂಪಿಸಿದರು. ಅನ್ನೇಶ ಕೊಪ್ಪಳ ವಂದಿಸಿದರು.



ಮಾಜಿ ಯೋಧ ದತ್ತಾತ್ರೇಯ ಜೋಶಿ ಮಾತನಾಡಿ, ಆಧುನಿಕತೆಯ ಭರದಲ್ಲಿ ಮೊಬೈಲ್ ಮತ್ತು ಟಿ.ವಿ. ತಂತ್ರಜ್ಞಾನದ ಮೊರೆ ಹೋಗಿದ್ದು, ನಮ್ಮ ಭಾರತೀಯ ಸಂಸ್ಕೃತಿ, ಸಂಪ್ರದಾಯವನ್ನು ಮರೆತಿದ್ದೇವೆ. ಆದ್ದರಿಂದ ನಮ್ಮ ಆರೋಗ್ಯ ಸುಧಾರಣೆಗೆ ಯೋಗವನ್ನು ಅಳವಡಿಸಿಕೊಂಡು ಜೀವನ ಶೈಲಿಯನ್ನು ಬದಲಾವಣೆ ಮಾಡಿಕೊಳ್ಳುವುದು ಅವಶ್ಯವಿದೆ ಎಂದರು.

# 180 ಕೋಟಿ ಸಾಲದ ಡೀಫಾಲ್ಟ್ ಪ್ರಕರಣ: ವಿಜಯ್ ಮಲ್ಯಗೆ ಜಾಮೀನು ರಹಿತ ವಾರೆಂಟ್

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**



ಇಂಡಿಯನ್ ಓವರ್‌ಸೀಸ್ ಬ್ಯಾಂಕ್‌ಗೆ (ಐಒಬಿ) ಸಂಬಂಧಿಸಿ 180 ಕೋಟಿ ಸಾಲ ಮರುಪಾವತಿಸದೆ ಪರಾರಿಯಾಗಿರುವ ಉದ್ಯಮಿ ವಿಜಯ್ ಮಲ್ಯ ವಿರುದ್ಧ ಮುಂಬೈನ ವಿಶೇಷ ನ್ಯಾಯಾಲಯ ಜಾಮೀನು ರಹಿತ ವಾರಂಟ್ (ಎನ್‌ಬಿಡಬ್ಲ್ಯು) ಜಾರಿ ಮಾಡಿದೆ.

ವಿಶೇಷ ಸಿಬಿಐ ನ್ಯಾಯಾಲಯದ ನ್ಯಾಯಾಧೀಶ ಎಸ್‌ಪಿ ನಾಯಕ್ ನಿಂಬಾಳ್ಕರ್ ಅವರು ಜೂನ್ 29 ರಂದು ಮಲ್ಯ ವಿರುದ್ಧ ಎನ್‌ಬಿಡಬ್ಲ್ಯೂ ಹೊರಡಿಸಿದ್ದು, ಸೋಮವಾರ ವಿವರವಾದ ಆದೇಶ ಲಭ್ಯವಾಗಿದೆ.

ಸಿಬಿಐ ಸಲ್ಲಿಕೆಯನ್ನು ಗಣನೆಗೆ ತೆಗೆದುಕೊಂಡ ನಂತರ 68 ವರ್ಷದ ಉದ್ಯಮಿಯ ವಿರುದ್ಧ ಹೊರಡಿಸಲಾದ ಇತರ ಜಾಮೀನು ರಹಿತ ವಾರಂಟ್‌ಗಳನ್ನು ಮತ್ತು ಅವರ ಸ್ಥಾನಮಾನವನ್ನು ಪರಾರಿ ಎಂದು ಉಲ್ಲೇಖಿಸಿದ ನ್ಯಾಯಾಲಯ, "ಮಲ್ಯ ಉಪಸ್ಥಿತಿಯನ್ನು ಭದ್ರಪಡಿಸಿಕೊಳ್ಳಲು ಇದು ಅವರ ವಿರುದ್ಧದ ಮುಕ್ತ ಎನ್‌ಬಿಡಬ್ಲ್ಯೂ ಹೊರಡಿಸಲು ಸೂಕ್ತವಾದ ಪ್ರಕರಣವಾಗಿದೆ" ಎಂದು ಹೇಳಿದೆ.

ಪ್ರಕರಣದ ತನಿಖೆ ನಡೆಸುತ್ತಿರುವ ಸಿಬಿಐ, ಈಗ ನಿಷ್ಕ್ರಿಯಗೊಂಡಿರುವ ಕಿಂಗ್‌ಫಿಷರ್ ಏರ್‌ಲೈನ್ಸ್‌ನ ಪ್ರವರ್ತಕರು "ಉದ್ದೇಶಪೂರ್ವಕವಾಗಿ" ಸಾಲ ಪಾವತಿಸದೆ ಸರ್ಕಾರ ನಡೆಸುವ ಬ್ಯಾಂಕ್‌ಗೆ 180 ಕೋಟಿಗೂ ಹೆಚ್ಚು ನಷ್ಟವನ್ನು ಉಂಟುಮಾಡಿದ್ದಾರೆ ಎಂದು ಆರೋಪಿಸಿದೆ.

ಜಾರಿ ನಿರ್ದೇಶನಾಲಯ (ಇಡಿ) ತನಿಖೆ ನಡೆಸುತ್ತಿರುವ ಮನಿ ಲಾಂಡರಿಂಗ್ ಪ್ರಕರಣದಲ್ಲಿ ಈಗಾಗಲೇ ಪರಾರಿಯಾಗಿರುವ ಆರ್ಥಿಕ ಅಪರಾಧಿ ಎಂದು ಘೋಷಿಸಲ್ಪಟ್ಟಿರುವ ಮದ್ಯದ ಉದ್ಯಮಿ ಪ್ರಸ್ತುತ ಲಂಡನ್‌ನಲ್ಲಿ ನೆಲೆಸಿದ್ದಾರೆ ಮತ್ತು ಭಾರತ ಸರ್ಕಾರವು ಅವರನ್ನು ಹಸ್ತಾಂತರಿಸಲು ಪ್ರಯತ್ನಿಸುತ್ತಿದೆ.

2007 ಮತ್ತು 2012ರ ನಡುವೆ ಆಗಿನ ಕಾರ್ಯಾಚರಣೆಯ ಕಿಂಗ್‌ಫಿಷರ್ ಏರ್‌ಲೈನ್ಸ್ ಐಒಬಿನಿಂದ ಪಡೆದ ಸಾಲವನ್ನು ಬೇರೆಡೆಗೆ ತಿರುಗಿಸಿದ ಆರೋಪದ ಮೇಲೆ ಸಿಬಿಐ ದಾಖಲಿಸಿದ ವಂಚನೆ ಪ್ರಕರಣಕ್ಕೆ ಈ ವಾರಂಟ್ ಸಂಬಂಧಿಸಿದೆ.

ಕೇಂದ್ರ ಏಜೆನ್ಸಿ ಇತ್ತೀಚೆಗೆ ನ್ಯಾಯಾಲಯದಲ್ಲಿ ಸಲ್ಲಿಸಿದ ಆರೋಪಪಟ್ಟಿ ಪ್ರಕಾರ, ಈ ಸಾಲ ಸೌಲಭ್ಯಗಳನ್ನು ಒಪ್ಪಂದದ ಅಡಿಯಲ್ಲಿ ಬ್ಯಾಂಕ್ ಆಧಾರವಾಗಿರುವ ಖಾಸಗಿ ವಾಹಕಕ್ಕೆ ನೀಡಲಾಗಿದೆ.

# ಕೊಟ್ಟೂರೇಶ್ವರ ರಥೋತ್ಸವ ಸಂಪನ್ನ


**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಇಲ್ಲಿಯ ಸಮೀಪದ ಹರ್ಲಾಪೂರ ಕೊಟ್ಟೂರೇಶ್ವರ ಮಠದ ಮಹಾರಥೋತ್ಸವವು ರವಿವಾರ ಸಂಜೆ ಸಾವಿರಾರು ಭಕ್ತಾಧಿಗಳ ಮಧ್ಯೆ ಸಂಭ್ರಮದಿಂದ ಜರುಗಿತು.

ಸೇರಿದ ಭಕ್ತಾಧಿಗಳು ಘೋಷಣೆಗಳನ್ನು ಕೂಗುತ್ತಾ ರಥವನ್ನು ಎಳೆದರು. ಜಾಂಜ್ ಮೇಳ, ನಂದಿಕೋಲ ಮೇಳ ಸೇರಿದಂತೆ ವಿವಿಧ ವಾದ್ಯಗಳೊಂದಿಗೆ ತೇರು ಸಾಗಿತು. ರಥದಲ್ಲಿ ಡಾ.ಕೊಟ್ಟೂರೇಶ್ವರ ಶ್ರೀಗಳು ಆಸೀನರಾಗಿದ್ದು ವಿಶೇಷವಾಗಿತ್ತು. ಹರ್ಲಾಪೂರ ಗ್ರಾಮದ ಸುತ್ತ ಮುತ್ತಲಿನ ಗ್ರಾಮದ ಭಕ್ತಾಧಿಗಳು ರಥೋತ್ಸವಕ್ಕೆ ಆಗಮಿಸಿದ್ದರು. ಕೊಟ್ಟೂರೇಶ್ವರ ಗದ್ದುಗೆಗೆ ನೈವೇದ್ಯ ತಲುಪಿಸಿ ತಮ್ಮ ಸಂಕಲ್ಪವನ್ನು ಅರ್ಪಿಸಿದರು.



ಇದಕ್ಕೂ ಮುನ್ನ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳನ್ನು ಸಿದ್ದಲಿಂಗೇಶ ಕೋರಿಯವರ ಮನೆಯಿಂದ ಗ್ರಾಮದ ಪ್ರಮುಖ ಬೀದಿಯಲ್ಲಿ ಮೆರವಣಿಗೆ ಮಾಡುತ್ತಾ ಶ್ರೀ ಮಠಕ್ಕೆ ಕರೆತರಲಾಯಿತು. ಮುಂಜಾನೆ ಕೊಟ್ಟೂರೇಶ್ವರ ಕರ್ತೃ ಗದ್ದುಗೆಗೆ ಮಹಾರುದ್ರಭಿಷೇಕ ಹಾಗೂ ಸಹಸ್ರ ಬಿಲ್ವಾರ್ಚನೆ ಕಾರ್ಯಗಳು ಧಾರ್ಮಿಕ ವಿಧಿ ವಿಧಾನಗಳೊಂದಿಗೆ ನೆರವೇರಿದವು.



ಗದಗ ನಗರಕ್ಕೆ ಆಗಮಿಸಿದ್ದ ಹಾವೇರಿ-ಗದಗ ಸಂಸದ ಬಸವರಾಜ ಬೊಮ್ಮಾಯಿ ಅವರಿಗೆ ಬಿಜೆಪಿ ಓಬಿಸಿ ಮೋರ್ಚಾ ಗದಗ ಗ್ರಾಮೀಣ ಮಂಡಳದ ವತಿಯಿಂದ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ರಾಜ್ಯ ಓಬಿಸಿ ಘಕಟದ ರಾಜ್ಯ ಮಾಜಿ ಕಾರ್ಯದರ್ಶಿ ರವಿ ದಂಡಿನ, ಬಿಜೆಪಿ ಓಬಿಸಿ ಮೋರ್ಚಾ ಗದಗ ಗ್ರಾಮೀಣ ಮಂಡಳದ ಅಧ್ಯಕ್ಷ ರವಿ ವಗ್ಗನವರ, ಕುಮಾರ ಮಾರನಬಸರಿ, ಚನ್ನಮ್ಮ ಹುಳಕಣ್ಣವರ, ಕಮಲಾಕ್ಷಿ ಗೊಂದಿ, ಮಹೇಶ ಕಮ್ಮಾರ, ಗಣೇಶ ಗಟ್ಟಿ, ಸಿದ್ದಪ್ಪ ಜೊಂಡಿ, ಬಸವರಾಜ ಹರ್ಲಾಪೂರ, ಮಂಜುನಾಥ ಹರ್ಲಾಪೂರ ಮುಂತಾದವರು ಉಪಸ್ಥಿತರಿದ್ದರು.

# ವೈದ್ಯ ವೃತ್ತಿ ಅತ್ಯಂತ ಪವಿತ್ರವಾದುದು

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ವೈದ್ಯ ವೃತ್ತಿ ಅತ್ಯಂತ ಪವಿತ್ರವಾದ ಹುದ್ದೆಯಾಗಿದೆ ಎಂದು ಡಾ. ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿ ಗವಿಮಠದ ಸಭಾ ಭವನದಲ್ಲಿ ಡಾ. ಐ.ಸಿ. ಪಾಟೀಲ್ ದಂಪತಿಗಳ ಸನ್ಮಾನ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಡಾ. ಐ.ಸಿ. ಪಾಟೀಲ್ ಅವರು ಸುದೀರ್ಘ 42 ವರ್ಷಗಳ ಕಾಲ ಮುಳಗುಂದ ಪಟ್ಟಣದ ಜನರಿಗೆ ತಮ್ಮ ವೈದ್ಯ ವೃತ್ತಿಯನ್ನು ಅತ್ಯಂತ ಪ್ರಾಮಾಣಿಕವಾಗಿ, ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಿದವರು. ಇಂತಹ ಮಹನೀಯರು ವೈದ್ಯ ವೃತ್ತಿಯ ಘನತೆಯನ್ನು ಹೆಚ್ಚಿಸಿ, ಬಡವರ ಏಳಿಗಾಗಿ ಹಗಲಿರುಳು ಶ್ರಮಿಸಿದವರು. ಇಂತಹ ವೈದ್ಯರ ನಾಡಿನಲ್ಲಿ ಸಿಗುವುದು ಅಪರೂಪವಾಗಿದ್ದು, ಇವರ ನಿವೃತ್ತ ಜೀವನ ಸುಖಮಯವಾಗಿರಲಿ ಎಂದು ಹಾರೈಸಿದರು.




ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಸಮ್ಮುಖ ವಹಿಸಿ ಮಾತನಾಡಿ, ಸಮಾಜದ ಜನರಿಗಾಗಿ ತಮ್ಮ ವೈದ್ಯ ವೃತ್ತಿಯನ್ನು ಮುಡಿಪಾಗಿಟ್ಟು ಸೇವೆ ನೀಡಿದ ಡಾ. ಐ.ಸಿ. ಪಾಟೀಲ್ ವೈದ್ಯ ವೃತ್ತಿಯ ಘನತೆಯನ್ನು ಹೆಚ್ಚಿಸಿದ ಪುಣ್ಯಾತ್ಮರು ಎಂದರು.

ಡಾ. ಐ.ಸಿ. ಪಾಟೀಲ್ ಸನ್ಮಾನ ಸ್ವೀಕರಿಸಿ ಮಾತನಾಡಿ, ವೈದ್ಯ ವೃತ್ತಿ ಸಿಗುವುದೇ ಒಂದು ಪುಣ್ಯ. ಇಷ್ಟು ವರ್ಷ ಮುಳಗುಂದ ಜನತೆ ನೀಡಿದ ಸಹಾರಕಾರದಿಂದ ಇಷ್ಟು ಅಚ್ಚುಕಟ್ಟಾಗಿ ಕಾರ್ಯ ನಿರ್ವಹಿಸಲು ಸಾಧ್ಯವಾಗಿದ್ದು, ಮುಳಗುಂದ ಪಟ್ಟಣದ ಜನರನ್ನು ನಾನು ಎಂದೂ ಮರೆಯಲು ಸಾಧ್ಯವಿಲ್ಲ ಎಂದರು.

ಎಸ್.ಎಂ. ನೀಲಗುಂದ, ಎಂ.ಡಿ. ಬಟ್ಟೂರ, ಬಿ.ವಿ. ಸುಂಕಾಪೂರ, ಡಾ. ಎಸ್.ಸಿ. ಚವಡಿ, ಗೌರಮ್ಮ ಬಡ್ನಿ, ಗಿರಿಜಾ ಪಾಟೀಲ್, ಪಿ.ಎಸ್. ಮರಿದೇವರಮಠ, ಎಸ್.ಎಂ. ಉಜ್ಜಣ್ಣವರ, ಮಂಜುನಾಥ ಮಟ್ಟಿ, ವರ್ಷಾ ಬಾರಕೇರ, ವಿಜಯಲಕ್ಷ್ಮಿ ಹಿರೇಮಠ ಇದ್ದರು.



ನಗರದ 13ನೇ ವಾರ್ಡಿನಲ್ಲಿ ಭಾನುವಾರ ವನ ಮಹೋತ್ಸವ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ವಾರ್ಡಿನ ಹಿರಿಯರಾದ ಮುಕುಂದ ಪೋತ್ನೀಸ್, ತುಳಸಿ ಫಾರ್ಮಾ ಡಾ. ಸುರೇಶ ಮಲ್ಲೂರ, ನಗರಸಭೆ ಸದಸ್ಯರಾದ ಮುತ್ತಣ್ಣ ಮುಶಿಗೇರಿ, ನಾಗರಾಜ ಉಮಚಗಿ, ಮುತ್ತಣ್ಣ ಹೂಗಾರ, ಅರವಿಂದ ಶೆಟ್ಟರ, ಬಸಪ್ಪ ರಣತೂರ, ಶರಣಪ್ಪ ಮೇಸ್ತ್ರಿ, ಮಂಜುನಾಥ ಬಟ್ಟೂರ, ವಿಶ್ವನಾಥ ಬಟ್ಟೂರ, ಮುಂತಾದವರು ಉಪಸ್ಥಿತರಿದ್ದರು.

## ಅಂತಾರಾಷ್ಟ್ರೀಯ ಮಾದಕ ವಸ್ತು ಸೇವನೆ, ಅಕ್ರಮ ಸಾಗಾಣಿಕೆ ವಿರೋಧಿ ದಿನಾಚರಣೆ

# ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಕೇಂದ್ರ ಕಾರಾಗೃಹ, ಧಾರವಾಡ ಮಾನಸಿಕ ಹಾಗೂ ನರವಿಜ್ಞಾನ ಸಂಸ್ಥೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಾನಸಿಕ ಆರೋಗ್ಯ ವಿಭಾಗ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದಲ್ಲಿ ಪ್ರಸಕ್ತ ವರ್ಷದ ಅಂತಾರಾಷ್ಟ್ರೀಯ ಮಾದಕ ವಸ್ತು ಸೇವನೆ ಹಾಗೂ ಅಕ್ರಮ ಸಾಗಾಣಿಕೆ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಜುಲೈ 3ರಂದು ಬೆಳಿಗ್ಗೆ 10.30 ಗಂಟೆಗೆ ಕರ್ನಾಟಕ ಕುಲ ಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಏರ್ಪಡಿಸಲಾಗಿದೆ.

ಜಿಲ್ಲಾಧಿಕಾರಿ ದಿವ್ಯ ಪ್ರಭು ಕಾರ್ಯಕ್ರಮವನ್ನು ಉದ್ಘಾಟಿಸುವರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಶಶಿ ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅಥಿತಿಗಳಾಗಿ ಹಿರಿಯ ಸಿವಿಲ್ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪರಶುರಾಮ. ಎಫ್.ದೊಡ್ಡಮನಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಹುಬ್ಬಳ್ಳಿ-ಧಾರವಾಡ ನಗರ ಪೊಲೀಸ್ ಆಯುಕ್ತೆ ರೇಣುಕಾ ಸುಕುಮಾರ, ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ. ಗೋಪಾಲ ಬ್ಯಾಕೋಡ, ಜಿಲ್ಲಾ ಕೇಂದ್ರ ಕಾರಾಗೃಹ ಅಧೀಕ್ಷಕ ಎಂ.ಎ. ಮರಿಗೌಡ, ಧಾರವಾಡ ಮಾನಸಿಕ ಹಾಗೂ ನರವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ.ಅರುಣಕುಮಾರ ಸಿ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಮಂಜುನಾಥ ಸುಳ್ಳೊಳ್ಳಿ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಮಾನಸಿಕ ಆರೋಗ್ಯ ವಿಭಾಗದ ಮನೋವೈದ್ಯ ಡಾ. ರಾಘವೇಂದ್ರ ಪಾಟೀಲ ವಿಶೇಷ ಉಪನ್ಯಾಸ ನೀಡುವರು ಎಂದು ಮಾನಸಿಕ ಆರೋಗ್ಯ ವಿಭಾಗದ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಕಳಸೂರಮಠ ಎಸ್.ಬಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಥಿತಿಗಳಾಗಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಸಂಗಪ್ಪ ಗಾಬಿ, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ. ಸುಜಾತ ಹಸವೀಮಠ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ. ಮಹೇಶ ಚಿತ್ತರಗಿ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ಪರಶುರಾಮ ಎಫ್. ಕೆ., ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಮಂಜುನಾಥ ಎಸ್, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ. ರವೀಂದ್ರ ಬೋವೇರ, ತಾಲೂಕಾ ಆರೋಗ್ಯಾಧಿಕಾರಿ ಡಾ. ತನುಜಾ ಕೆ.ಎನ್. ಕಾರ್ಯಕ್ರಮದಲ್ಲಿ ಭಾಗವಹಿಸುವರು.

### 'ನಾನು ಐನ್‌ಸ್ಟೈನ್' ಪುಸ್ತಕ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಡಾ. ಬಿದರಕುಂದಿ

# ಸೃಷ್ಟಿಯ ವೈವಿಧ್ಯತೆ ಅಗಾಧವಾಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿಜ್ಞಾನ ಮತ್ತು ಗಣಿತದ ಅನೇಕ ವಿಚಾರಗಳನ್ನು ನಾಟಕಗಳ ಮೂಲಕ ಪ್ರಸ್ತುತಪಡಿಸುವ ಸಾಮಾನ್ಯ ಜನರ ಅರಿವನ್ನು ಹೆಚ್ಚಿಸಬಹುದಾಗಿದೆ. ಸೃಷ್ಟಿಯ ವೈವಿಧ್ಯತೆ ಅಗಾಧವಾದದ್ದು. ಇದರ ಅನ್ವೇಷಣೆಗೆ ಅಲ್ಬರ್ಟ್ ಐನ್‌ಸ್ಟೈಟ್ ತನ್ನ ಜೀವನವನ್ನೇ ಮುಡಿಪಾಗಿಟ್ಟನು. ಅವನು ಪ್ರತಿಪಾದಿಸಿದ ಸಿದ್ಧಾಂತ ಹಾಗೂ ಜೀವನವನ್ನು ರಂಗದ ಮೂಲಕ ಅಭಿವ್ಯಕ್ತಿಸುವ ಹಿನ್ನೆಲೆಯಲ್ಲಿ 'ನಾನು ಐನ್‌ಸ್ಟೈನ್' ಕೃತಿ ಮಹತ್ವದ್ದಾಗಿದೆ ಎಂದು ಹಿರಿಯ ಸಾಹಿತಿ ಡಾ. ಶ್ಯಾಮಸುಂದರ ಬಿದರಕುಂದಿ ನುಡಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ವಿದ್ಯಾದಾನ ಸಮಿತಿ ಗದಗ ಹಾಗೂ ಗುರುವರ್ಯ ಕೆ.ಎಸ್.ಎನ್ ಅಯ್ಯಂಗಾರ ಸ್ಮಾರಕ ಸಮಿತಿ ಸಂಯುಕ್ತ ಆಶ್ರಯದಲ್ಲಿ ಗದುಗಿನ ವಿದ್ಯಾದಾನ ಸಮಿತಿಯ ಶ್ರೀಮತಿ ಎಂ.ಬಿ. ಹೂಯಿಲಗೋಳ ಶಿಕ್ಷಣ ಮಹಾವಿದ್ಯಾಲಯದ ಸಭಾಭವನದಲ್ಲಿ ನಡೆದ ಡಾ. ಪ್ರಕಾಶ ಗರುಡ ವಿರಚಿತ 'ನಾನು ಐನ್‌ಸ್ಟೈನ್' ಪುಸ್ತಕ ಲೋಕಾರ್ಪಣೆ ಹಾಗೂ ಏಕವ್ಯಕ್ತಿ ರಂಗಪ್ರದರ್ಶನದಲ್ಲಿ ಮಾತನಾಡಿದರು.




ಸುಮಾರು ಮೂವತ್ತು ವರ್ಷಗಳಿಂದ ರಂಗಭೂಮಿಯ ಜೊತೆಗೆ ಕನ್ನಡದ ನಂಟು ಬೆಳೆಸಿಕೊಂಡು ಬಂದಿರುವ ಪ್ರಕಾಶ ಗರುಡರು ಈ ಕೃತಿಯಲ್ಲಿ ಐನ್‌ಸ್ಟೈನ್ ಸಂಶೋಧನೆಯ ಹರವು, ಸಂಗೀತ ಆಸಕ್ತಿ, ಎಲ್ಲಕ್ಕೂ ಮಿಗಿಲಾಗಿ ವಿಜ್ಞಾನಕ್ಕೆ ಮಾನವೀಯ ಲೇಪನದ ಅಂಶಗಳನ್ನು ಕಾಣಬಹುದಾಗಿದೆ ಎಂದು ತಿಳಿಸಿದರು.

ವೇದಿಕೆ ಮೇಲೆ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಶ್ರೀನಿವಾಸ ಹುಯಿಲಗೋಳ, ಡಾ. ಈ.ಬಿ. ಪಾಟೀಲ ಡಾ.ಅನಂತ ಶಿವಪೂರ, ಅಶೋಕ ಖಟವಟೆ, ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಡಾ.ದತ್ತಪ್ರಸನ್ನ ಪಾಟೀಲ ಉಪಸ್ಥಿತರಿದ್ದರು.

ಪುಸ್ತಕ ಲೋಪಾರ್ಪಣೆ ನಂತರ ಡಾ. ಪ್ರಕಾಶ ಗರುಡ ನಿರ್ದೇಶನದ 'ನಾನು ಐನ್‌ಸ್ಟೈನ್' ಏಕವ್ಯಕ್ತಿ ರಂಗ ಪ್ರದರ್ಶನ ನಡೆಯಿತು. ವಿಜ್ಞಾನಿಯ ಜೀವನದ ಎಲ್ಲ ಆಯಾಮಗಳನ್ನು ಎಳೆಎಳೆಯಾಗಿ ಏಕವ್ಯಕ್ತಿ ರಂಗದ ಮೇಲೆ ಪ್ರದರ್ಶಿಸಿ ಕಲಾಸಕ್ತರ ಮನಸೂರೆಗೊಂಡಿತು.

ಕಾರ್ಯಕ್ರಮದಲ್ಲಿ ಪ್ರೊ.ಚಂದ್ರಶೇಖರ ವಸ್ತ್ರದ, ಎಸ್.ಎಸ್. ಕಳಸಾಪುರ, ಡಾ.ಗಂಗೂಬಾಯಿ ಪವಾರ, ಪ್ರೊ. ವಿ.ಎಸ್. ದಲಾಲಿ, ಜಿ.ಎ. ಪಾಟೀಲ, ಸುರೇಶ ಕುಂಬಾರ, ಡಾ. ವಾಣಿ ಶಿವಪೂರ, ಎಚ್.ಬಿ. ಸುಬ್ಬಣ್ಣವರ, ರಾಜೇಶ್ವರಿ ಬಡ್ನಿ, ಎಂ.ಸಿ. ಕಟ್ಟಿಮನಿ, ಸುಶಿಲೇಂದ್ರ ಜೋಶಿ, ರಮೇಶ ಮೇರವಾಡೆ, ಸೀತಾ ಪಾಟೀಲ, ನಡುವಿನಮನಿ ಎಚ್.ಬಿ., ಎಂ.ಎಫ್. ಢಾಲಾಯತ, ಶೈಲಶ್ರೀ ಕಪ್ಪರದ, ಉಮೇಶ ಚಳ್ಳಮರದ, ಎ.ಸಿ. ಹಿರೇಮಠ, ಪದ್ಮಾ ಕಬಾಡಿ, ಗಿರೀಶ ಪಂತರ, ಹರೀಶ ಮೇಕಳಿ, ಶಿವಾನಂದ ಯಾಳಗಿ, ಎಸ್.ಎಲ್. ಹುಯಿಲಗೋಳ, ಶಾಮಸುಂದರ ಕುಲಕರ್ಣಿ, ಕೃಷ್ಣಾಜಿ ನಾಡಿಗೇರ, ವಿ.ಕೆ. ಪುರಾಣಿಕ, ಸೆಲ್ವಾ, ಅಂದಯ್ಯ ಅರವಟಗಿಮಠ, ಎಂ.ಆರ್. ಡೊಳ್ಳಿನ, ಪ್ರಶಾಂತ ಪಾಟೀಲ, ಸುನೀಲ ಕೆರಿ, ಶಕುಂತಲಾ ಸಿಂಧೂರ, ವಿ.ಎಸ್. ದಲಾಲಿ, ಉಮಾ ಕಣವಿ, ಎಸ್.ಎಂ. ಪೂಜಾರ, ಆರ್.ಎಸ್. ಲಮಾಣಿ, ಪಿ.ಬಿ. ಬಂಡಿ, ಷಡಕ್ಷರಿ ಮೆಣಸಿನಕಾಯಿ, ಬಿ.ಬಿ. ಹೊಳಗುಂದಿ, ಮುಕುಂದ ಪೋತ್ನೀಸ್, ಬಸವರಾಜ ಗಣಪ್ಪನವರ, ಡಿ.ಎಚ್. ಮಲ್ಲೇಶ, ಪ್ರೊ. ಶಶಿಕಾಂತ ಕೊರ್ಲಹಳ್ಳಿ, ಎಸ್.ಎಂ. ಕಾತರಕಿ, ಎಸ್.ವಿ. ಬಳ್ಳಿ, ರತ್ನಾ ಪುರಂತರ, ಈರನಗೌಡ ಮಣಕವಾಡ, ಎಸ್.ಎಸ್. ಸೂಳಿಕೇರಿ, ಡಿ.ಎಸ್. ಬಾಪುರಿ, ಎಂ.ಎಚ್. ಸವದತ್ತಿ, ಜಗದೀಶ ಯಾಳಗಿ, ಎಸ್.ಬಿ. ಪಾಟೀಲ, ಪ್ರ.ತೋ. ನಾರಾಯಣಪುರ, ಅಶೋಕ ಸತ್ಯರಡ್ಡಿ, ರಾಜಶೇಖರ ಕರಡಿ, ಬಿ.ಎಸ್. ಹಿಂಡಿ, ವಿದ್ಯಾದಾನ ಸಮಿತಿಯ ಶಿಕ್ಷಕ ಬಳಗದವರು ಉಪಸ್ಥಿತರಿದ್ದರು.

ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಡಾ.ದತ್ತಪ್ರಸನ್ನ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಶಿವಾನಂದ ಗಿಡ್ನಂದಿ ವಂದಿಸಿದರು.

> ಕೃತಿಯ ಲೇಖಕ ಡಾ. ಪ್ರಕಾಶ ಗರುಡ ಮಾತನಾಡಿ, ವಿಚಾರವಂತರಲ್ಲಿ ಸಂವೇದನಾಶೀಲ ಕಲ್ಪನೆಗಳನ್ನು ಒಡಮೂಡಿಸುವ ಈ ಏಕಪಾತ್ರ ರೂಪಕ ಈಗಾಗಲೇ ರಂಗಭೂಮಿಯ ಮೇಲೆ ಯಶಸ್ವಿ ಪ್ರಯೋಗಗಳನ್ನು ಕಂಡಿದೆ. ಇಂದು ಪುಸ್ತಕ ಮತ್ತು ರಂಗಪ್ರದರ್ಶನ ಏಕಕಾಲಕ್ಕೆ ನಡೆಯುತ್ತಿರುವ ಸಂತೋಷ ತಂದಿದೆ ಎಂದರು.

## ವಿಜಯಪುರ ಇಸ್ಲಾಂ ವಾಸ್ತುಕಲೆಯ ಪ್ರಯೋಗಶಾಲೆ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದಲ್ಲಿ ಇಸ್ಲಾಂ ವಾಸ್ತುಕಲೆಯ ಅಧ್ಯಯನಕ್ಕೆ ಪ್ರಮುಖವಾಗಿರುವ ಕೆಲವು ಸ್ಥಳಗಳಲ್ಲಿ ವಿಜಯಪುರ ಒಂದಾಗಿದ್ದು, ಇದು ಬಿಜ್ಜನಹಳ್ಳಿ, ವಿಜಾಪುರ, ಬಿಜಾಪುರ ಎಂದೆಲ್ಲ ಕರೆಯಲ್ಪಟ್ಟಿದೆ. ಬಾದಾಮಿ ಚಾಲುಕ್ಯರು, ಮಳಖೇಡದ ರಾಷ್ಟ್ರಕೂಟರು, ಕಲ್ಯಾಣದ ಚಾಳುಕ್ಯರು ಮತ್ತು ಕಲಚೂರಿಗಳು, ದೆಹಲಿ ಖಿಲ್ಜಿಗಳು, ಬಹಮನಿ ಸುಲ್ತಾನರು, ಆದಿಲ್‌ಶಾಹಿಗಳು, ಮುಘಲರು, ಹೈದರಾಬಾದ ನಿಜಾಮರು, ಪೇಶ್ವೆಗಳು, ಬ್ರಿಟಿಷರ ಆಡಳಿತಕ್ಕೆ ಒಳಪಡುತ್ತ ಬಂದಿದ್ದು, ಹಲವು ವರ್ಷಗಳು ಆದಿಲ್‌ಶಾಹಿಗಳ ರಾಜಧಾನಿಯಾಗಿತ್ತು ಎಂದು ಪ್ರೊ. ಬಸವಂತೆಪ್ಪ ದೊಡ್ಡಮನಿ ಹೇಳಿದರು.

ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಇತಿಹಾಸ ವಿಭಾಗದ 4ನೇ ಸೆಮಿಸ್ಟರ್ ವಿದ್ಯಾರ್ಥಿಗಳನ್ನು ಡಾ. ಅಪ್ಪಣ್ಣ ಹಂಜೆ ಅವರ ಮಾರ್ಗದರ್ಶನದಂತೆ 'ವಿಜಯಪುರದ ಇತಿಹಾಸ ಮತ್ತು ಸ್ಮಾರಕಗಳು' ಕುರಿತು ಅಧ್ಯಯನಕ್ಕೆ ವಿಜಯಪುರದಲ್ಲಿ ಕ್ಷೇತ್ರಕಾರ್ಯ ಕೈಗೊಂಡು ವಿದ್ಯಾರ್ಥಿಗಳಿಗೆ ಅಲ್ಲಿಯ ಸ್ಮಾರಕಗಳ ನಿಮಾರ್ತೃ, ಕಾಲಮಾನ, ವಿಶೇಷತೆಯನ್ನು ಪರಿಚಯಿಸಿದರು.

ಇಸ್ಲಾಂ ಸ್ಮಾರಕಗಳು ಇಂಡೋ-ಇಸ್ಲಾಮಿಕ್ ವಾಸ್ತುಕಲೆಯ ಪರಿಕಲ್ಪನೆ, ಲಕ್ಷಣಗಳು, ವೈಶಿಷ್ಟ್ಯತೆಗೆ ಅತ್ಯುತ್ತಮ ನಿದರ್ಶನಗಳಾಗಿವೆ. ಶಿವಗಿರಿಯಲ್ಲಿ ಪ್ರತಿಷ್ಠಾಪಿತ 85 ಅಡಿ ಎತ್ತರದ ಶಿವನ ಶಿಲ್ಪವು ದೇಶದ 2ನೇ ಅತಿದೊಡ್ಡ ಶಿವನ ಶಿಲ್ಪವೆಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಕಿಲ್ಲಾದಲ್ಲಿರುವ ಸಹಸ್ರಫಣಿ ಪಾರ್ಶ್ವನಾಥ ಬಸದಿಯಲ್ಲಿ ಪ್ರತಿಷ್ಠಾಪಿತ ಪಾರ್ಶ್ವನಾಥನ ಶಿಲ್ಪವು ವಿಶಿಷ್ಟವಾಗಿದ್ದು, ಈತನ ಶಿರದ ಮೇಲಿರುವ 1008 ಹಡೆಗಳ ಸರ್ಪವು ಆಕರ್ಷಕವಾಗಿದೆ. ಒಟ್ಟಾರೆ ವಿಜಯಪುರವು ಇಸ್ಲಾಂ ವಾಸ್ತುಕಲೆ ಅಧ್ಯಯನಾಸಕ್ತರಿಗೆ ಪ್ರಯೋಗಶಾಲೆಯಂತಿದೆ ಎಂದು ಪ್ರೊ. ದೊಡ್ಡಮನಿ ಹೇಳಿದರು.

## ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣ ಪ್ರದೇಶದ (ಸರ್ಕಾರಿ ಆಸ್ಪತ್ರೆಯಲ್ಲಿನ ಘಟನೆ ಹೊರತುಪಡಿಸಿ) ವ್ಯಾಪ್ತಿಯಲ್ಲಿ ಘಟಿಸುವ ಜನನ ಹಾಗೂ ಮರಣ ಘಟನೆಗಳನ್ನು ನೋಂದಾಯಿಸಲು ಸರ್ಕಾರ ಜುಲೈ 01, 2024 ರಿಂದ ಜನನ ಅಥವಾ ಮರಣ ಘಟಿಸಿದ ದಿನದಿಂದ 30 ದಿನದೊಳಗಿನ ಘಟನೆಗಳ ನೋಂದಣಿಯನ್ನು ನೋಂದಾಯಿಸಲು ಗ್ರಾಮ ಪಂಚಾಯತಿಯನ್ನು ಉಪನೋಂದಣಿ ಘಟಕವನ್ನಾಗಿ ಸ್ಥಾಪಿಸಿ ಆ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳನ್ನು ಉಪನೊಂದಣಾಧಿಕಾರಿಗಳನ್ನಾಗಿ ನೇಮಿಸಿ ಆದೇಶಿಸಿರುತ್ತದೆ.

ಗ್ರಾಮೀಣ ಪ್ರದೇಶದ ವ್ಯಾಪ್ತಿಯಲ್ಲಿ ಘಟಿಸಿದ ಜನನ ಅಥವಾ ಮರಣ ಘಟನೆಯನ್ನು ಘಟನೆ ಜರುಗಿದ ದಿನದಿಂದ 30 ದಿನದೊಳಗಿದ್ದಲ್ಲಿ ಆಯಾ ಗ್ರಾಮ ಪಂಚಾಯತದಲ್ಲಿ ಲಭ್ಯವಿರುವ ನಿಗಧಿತ ನಮೂನೆಯಲ್ಲಿ ಭರ್ತಿ ಮಾಡಿ ಅವಶ್ಯಕ ದಾಖಲೆಗಳೊಂದಿಗೆ ನೋಂದಣಿಗಾಗಿ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳಿಗೆ ಅರ್ಜಿ ಸಲ್ಲಿಸಲು ತಿಳಿಸಿದೆ. ಘಟನೆ 30ದಿನ ಮೀರಿದ್ದಲ್ಲಿ ಈ ಹಿಂದಿನಂತೆ ಆಯಾ ಗ್ರಾಮದ ಗ್ರಾಮ ಆಡಳಿತ ಅಧಿಕಾರಿಗಳಿಗೆ ಅರ್ಜಿ ಸಲ್ಲಿಸುವುದು, ಸರ್ಕಾರಿ ಆಸ್ಪತ್ರೆಯಲ್ಲಿ ಜರುಗುವ ಘಟನೆಗಳ ನೋಂದಣಿ ಪ್ರಕ್ರಿಯೆ ಈ ಹಿಂದಿನಂತೆ ಜಾರಿಯಲ್ಲಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಗ್ರಾಮ ಪಂಚಾಯತ ಕಾರ್ಯದರ್ಶಿ/ ಗ್ರಾಮ ಆಡಳಿತ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

ನಗರ ಪ್ರದೇಶದ ಆಸ್ಪತ್ರೆ, ಮನೆ ಹಾಗೂ ಇತರೆ ಸ್ಥಳಗಳಲ್ಲಿ ಘಟಿಸಿದ ಘಟನೆಗಳ ನೋಂದಣಿ ಈ ಹಿಂದಿನಂತೆ ಮುಂದುವರೆಯುತ್ತದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜನನ ಮರಣಗಳ ಜಿಲ್ಲಾ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮರ್ಪಕ ಸಾರಿಗೆ ಸೌಲಭ್ಯ ಕಲ್ಪಿಸಲು ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ತಾಲೂಕಿನ ಗ್ರಾಮೀಣ ಪ್ರದೇಶದ ಹಳ್ಳಿಗಳಿಗೆ ಸಾರಿಗೆ ಸೌಲಭ್ಯ ಕಲ್ಪಿಸಲು ಮುಂದಾಗಬೇಕು ಎಂದು ಒತ್ತಾಯಿಸಿ ವಿದ್ಯಾರ್ಥಿ ಫೆಡರೇಷನ್ (ಎಸ್‌ಎಫ್‌ಐ) ಸಂಘಟನೆ ವತಿಯಿಂದ ಸಾರಿಗೆ ಘಟಕದ ಪ್ರಭಾರಿ ವ್ಯವಸ್ಥಾಪಕರಿಗೆ ಮನವಿ ನೀಡಲಾಯಿತು.



ಗ್ರಾಮೀಣ ಪ್ರದೇಶಗಳಿಂದ ಸಾವಿರಾರು ವಿದ್ಯಾರ್ಥಿಗಳು ಶಿಕ್ಷಣಕ್ಕಾಗಿ ಪಟ್ಟಣಕ್ಕೆ ಬರುತ್ತಾ-ರೆ. ಆದರೆ ಅವರಿಗೆ ಸರಿಯಾಗಿ ಬಸ್ ಸೌಕರ್ಯ ಇಲ್ಲದೆ ಪರದಾಡುವಂತಾಗಿದ್ದು, ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ ಎಂದು ಸಂಘಟಕರು ದೂರಿದರು.

ಸಮೀಪದ ನಾಗರಸಕೊಪ್ಪ ತಾಂಡಾ, ಮಾಟರಂಗಿ ತಾಂಡಾ, ಬೆಣಚಮಟ್ಟಿ ಮಾರ್ಗವಾಗಿ ಒಂದು ಬಸ್‌ನ್ನು ಬೆಳಿಗ್ಗೆ ಮತ್ತು ಮಧ್ಯಾಹ್ನ ಎರಡು ಸಮಯದಲ್ಲಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ವ್ಯವಸ್ಥೆ ಮಾಡಬೇಕು. ಪ್ರತೀ ಶೈಕ್ಷಣಿಕ ವರ್ಷ ಆರಂಭದಲ್ಲಿ ಹೋರಾಟ ಮಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಕೂಡಲೇ ವಿದ್ಯಾರ್ಥಿಗಳ ಸಮಸ್ಯೆ ಬಗೆಹರಿಸಿ ಎಂದು ಆಗ್ರಹಿಸಿದರು.

ಸ್ಥಳಕ್ಕಾಗಮಿಸಿದ ಪ್ರಭಾರಿ ಡಿಪೋ ಮ್ಯಾನೇಜರ್ ಪ್ರತಿಭಟನಾಕಾರರ ಮನವಿ ಸ್ವೀಕರಿಸಿ ಮಾತನಾಡಿ, ಹೊಸ ಡಿಪೋ ಮ್ಯಾನೇಜರ್ ಬಂದ ಕೂಡಲೇ ಈ ಸಮಸ್ಯೆ ಬಗೆಹರಿಸಲು ಮುಂದಾಗುತ್ತೇನೆ ಎಂದರು.

ಈ ವೇಳೆ ಗಣೇಶ ರಾಠೋಡ, ಶರಣು ಎಂ., ಚಂದ್ರು ರಾಠೋಡ, ಬಸವರಾಜ ಪೂಜಾರ, ಪರಶುರಾಮ ಕೊನಸಾಗರ, ಬಸು ಪಾಟೀಲ, ಸುಭಾಷ್ ಬಡಿಗೇರ, ನೀಲಕಂಠ ಕರಡಿ, ಮಹಾಂತೇಶ ಜೋಗಿ, ಅರುಣಕುಮಾರ ಕೊಟ್ಟೂರು, ಅನಿಲ ಜಡದೇರ್, ಪ್ರತೀಕ ಪಲ್ಲೇದ ಮುಂತಾದವರಿದ್ದರು.

## ವ್ಯಸನ ಬಿಟ್ಟು ಸಶಕ್ತ ಸಮಾಜ ನಿರ್ಮಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಾದಕ ವಸ್ತುಗಳ ವ್ಯಸನವೆಂಬುದು ಸಮಾಜಕ್ಕೆ ಅಂಟಿದ ರೋಗವಾಗಿದೆ. ಆ ರೋಗಕ್ಕೆ ಯುವ ಸಮೂಹವೇ ಬಲಿಯಾಗುತ್ತಿದೆ ಎನ್ನುವುದು ಖೇದಕರ ಸಂಗತಿ ಎಂದು ಸಮಾಜಕಾರ್ಯ ಸಂಶೋಧನಾ ವಿದ್ಯಾರ್ಥಿ ಹುಸೇನಸಾಬ ವಣಗೇರಿ ಅಭಿಪ್ರಾಯಪಟ್ಟರು.




ಅವರು ನವಜ್ಯೋತಿ ಸೇವಾ ಸಂಸ್ಥೆಯ ವ್ಯಸನ ಮುಕ್ತಿ ಹಾಗೂ ಪುನರ್ವಸತಿ ಕೇಂದ್ರದಲ್ಲಿ ನಡೆದ ಮಾದಕ ದ್ರವ್ಯ ವಿರೋಧಿ ದಿನಾಚರಣೆಯಲ್ಲಿ ಉಪನ್ಯಾಸ ನೀಡಿದರು.

ತಂಬಾಕು, ಮದ್ಯ ಸೇರಿದಂತೆ ಹಲವಾರು ವ್ಯಸನಕ್ಕೆ ತುತ್ತಾಗುವ ಪದಾರ್ಥಗಳನ್ನು ಸೇವಿಸುವುದು ಅತೀ ದೊಡ್ಡ ಕಂಟಕವಾಗಿದೆ. ಅದರಿಂದ ಹೊರಬಂದು ನೆಮ್ಮದಿಯ ಬದುಕು ಸಾಗಿಸುವುದು ಪ್ರಸ್ತುತ ಅವಶ್ಯಕವಾಗಿದೆ. ಅದಕ್ಕಾಗಿ ಎಲ್ಲರೂ ವ್ಯಸನಮುಕ್ತರಾಗಿ ಸಶಕ್ತ ಸಮಾಜವನ್ನು ನಿರ್ಮಿಸಬೇಕು ಎಂದರು.

ಉದ್ಘಾಟಕರಾದ ಪ್ರಕಾಶ ಗಾಣಿಗೇರ ಮಾತನಾಡಿ, ವ್ಯಸನಕ್ಕೆ ನಮ್ಮ ದುರ್ಬಲ ಮನಸ್ಸೇ ಕಾರಣ. ಮನಸ್ಸನ್ನು ಹಿಡಿತದಲ್ಲಿ ಇಟ್ಟುಕೊಂಡು ಸರಿಯಾದ ಮಾರ್ಗದಲ್ಲಿ ನಡೆದಿದ್ದೇ ಆದರೆ ವ್ಯಸನದಿಂದ ಮುಕ್ತರಾಗಬಹುದು ಎಂದರು.

ಕಾರ್ಮಿಕ ಕಲ್ಯಾಣ ಇಲಾಖೆಯ ಅಧಿಕಾರಿ ಸಂದೇಶ ಪಾಟೀಲ್ ಮಾತನಾಡಿ, ಅಸಂಘಟಿತ ವಲಯದ ಕಾರ್ಮಿಕರು ಬಹಳಷ್ಟು ಸಾರಿ ವ್ಯಸನಕ್ಕೆ ತುತ್ತಾಗಿ ಆರ್ಥಿಕವಾಗಿ ಹಿನ್ನಡೆ ಅನುಭವಿಸುತ್ತಾರೆ. ಅಂತಹವರಿಗಾಗಿ ಸರ್ಕಾರ ಬಹಳಷ್ಟು ಯೋಜನೆ ರೂಪಿಸಿದ್ದು, ಅವುಗಳ ಉಪಯೋಗ ಪಡೆದು ಆರ್ಥಿಕವಾಗಿ ಸಬಲರಾಗಿ ವ್ಯಸನಮುಕ್ತ ಜೀವನ ನಡೆಸಬೇಕು ಎಂದರು.

ಕಾರ್ಮಿಕ ಕಲ್ಯಾಣ ಇಲಾಖೆಯ ನಿವೃತ್ತ ಅಧಿಕಾರಿ ಬಿ.ಆರ್. ಜಾಧವ, ನವಜ್ಯೋತಿ ಸೇವಾ ಸಂಸ್ಥೆಯ ಪದಾಧಿಕಾರಿಗಳು, ಸಿಬ್ಬಂದಿಗಳು ಇದ್ದರು. ಹನಮಂತಗೌಡ ಪಾಟೀಲ ಸ್ವಾಗತಿಸಿದರು. ಈಶ್ವರ ಹಟ್ಟಿ ನಿರೂಪಿಸಿದರು. ಬಸವರಾಜ ಕರಲಿಂಗಣ್ಣವರ ವಂದಿಸಿದರು.

## ಶಿಕ್ಷಣವು ಉತ್ತಮ ಮೌಲ್ಯ ಒದಗಿಸುತ್ತದೆ

■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣವು ಸೃಜನತೆಯೊಂದಿಗೆ ನಮ್ಮಲ್ಲಿ ಉತ್ತಮ ಮೌಲ್ಯಗಳನ್ನು ಒದಗಿಸುತ್ತದೆ. ವಿದ್ಯಾರ್ಥಿಗಳು ಉತ್ತಮ ಆದರ್ಶಗಳನ್ನು ರೂಢಿಸಿಕೊಂಡು ಸತ್ಪ್ರಜೆಗಳಾಗಬೇಕು ಎಂದು ಚಿಂತಕಿ ಸುಜಾತಾ ಆರ್. ಗುಡಿಮನಿ ಹೇಳಿದರು.



ಅವರು ಸೋಮವಾರ ಬೆಟಗೇರಿಯ ಸರಕಾರಿ ಮಾದರಿ ಶಾಲೆ ನಂ. 1ರಲ್ಲಿ ವಿದ್ಯಾರ್ಥಿಗಳಿಗೆ ಟೈ-ಬೆಲ್ಟ್ ವಿತರಿಸಿ ಮಾತನಾಡಿದರು.

ವಿದ್ಯಾರ್ಥಿ ಜೀವನದಲ್ಲಿ ಶಿಸ್ತು ಬಹಳ ಮುಖ್ಯ. ಸರಕಾರ ವಿದ್ಯಾರ್ಥಿಗಳಿಗೆ ಸಮವಸ್ತ್ರಗಳನ್ನು ನೀಡುತ್ತಿದ್ದು, ಅದರೊಂದಿಗೆ ಟೈ-ಬೆಲ್ಟ್‌ಗಳನ್ನು ಧರಿಸಿ ಶಿಸ್ತಿನಿಂದ ಶಾಲೆಗೆ ಹೋಗಿ ಪರಿಶ್ರಮದಿಂದ ಅಭ್ಯಾಸ ಮಾಡಿ ಯಶಸ್ಸು ಸಾಧಿಸಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಂಪನ್ಮೂಲ ವ್ಯಕ್ತಿ ಕೆ.ಎಸ್. ಬೇಲೇರಿ, ಸರಕಾರಿ ಶಾಲೆಗಳ ಸಬಲೀಕರಣ ಆಗಲು ಚಿಂತಕರ ಸಹಕಾರ ಅವಶ್ಯವಾಗಿದ್ದು, ಸುಜಾತಾ ಶರಣಬಸಪ್ಪ ಗುಡಿಮನಿ ಈ ಶಾಲೆಯ ಮಕ್ಕಳಿಗೆ ಟೈ-ಬೆಲ್ಟ್‌ಗಳನ್ನು ದೇಣಿಗೆಯಾಗಿ ನೀಡಿ ಶೈಕ್ಷಣಿಕ ಅಭಿವೃದ್ಧಿಗೆ ಕೈ ಜೋಡಿಸಿದ್ದಾರೆ ಎಂದರು.

ಅಧ್ಯಕ್ಷತೆಯನ್ನು ಶಾಲಾ ಮುಖ್ಯೋಪಾಧ್ಯಾಯೆ ಗೀತಾ ಜವಳಿ ವಹಿಸಿ ಮಾತನಾಡಿ, ಇದು ಶತಮಾನ ಕಂಡ ಶಾಲೆಯಾಗಿದ್ದು, ಇದಕ್ಕೆ ದಾನಿಗಳ ಹಾಗೂ ಈ ಶಾಲೆಯ ಹಳೆಯ ವಿದ್ಯಾರ್ಥಿಗಳ ಸಹಾಯ-ಸಹಕಾರ ಅವಶ್ಯವಾಗಿದೆ ಎಂದರು.

ಅರುಂಧತಿ ಹಾಗೂ ಸಾನ್ವಿ ಪ್ರಾರ್ಥಿಸಿದರು. ಎಂ.ಎಚ್. ಇಚ್ಚಂಗಿ ಸ್ವಾಗತಿಸಿದರು. ಎಸ್.ವ್ಹಿ. ಕೇಸರಿ ನಿರೂಪಿಸಿದರು. ಜಿ.ಸಿ. ಜವಳಿ ವಂದಿಸಿದರು.

### ಗದಗ-ಬೆಟಗೇರಿ ರೋಟರಿ ಕ್ಲಬ್‌ನಿಂದ ರಕ್ತದಾನ ಶಿಬಿರ

## ದಾನಗಳಲ್ಲಿ ರಕ್ತದಾನವೇ ಶ್ರೇಷ್ಠ



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ರೋಟರಿ ಐಕೇರ್ ಸೆಂಟರ್‌ನಲ್ಲಿ ರೋಟರಿ ಕ್ಲಬ್ ಗದಗ-ಬೆಟಗೇರಿ, ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ, ವಿಜಯ ಕಾಲೇಜ್ ಆಫ್ ಫೈನ್ ಆರ್ಟ್ಸ್ ಗದಗ ಹಾಗೂ ಬಸವೇಶ್ವರ ಬ್ಲಡ್ ಸೆಂಟರ್ ಗದಗ ಇವುಗಳ ಸಂಯುಕ್ತ ಆಶ್ರಯದಲ್ಲಿ 'ರಾಷ್ಟ್ರೀಯ ವೈದ್ಯರ ದಿನಾಚರಣೆ' ನಿಮಿತ್ತ ರಕ್ತದಾನ ಶಿಬಿರವನ್ನು ಏರ್ಪಡಿಸಲಾಗಿತ್ತು.

ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ. ಆರ್.ಬಿ. ಉಪ್ಪಿನ ಅಧ್ಯಕ್ಷತೆ ವಹಿಸಿ ಸಂದರ್ಭೋಚಿತವಾಗಿ ಮತನಾಡಿದರು. ವೇದಿಕೆಯ ಮೇಲೆ ರೋಟರಿ ಕ್ಲಬ್‌ನ ಅಸಿಸ್ಟಂಟ್ ಗವರ್ನರ್ ಶಿವಾಚಾರ್ಯ ಹೊಸಳ್ಳಿಮಠ, ಗದಗ-ಬೆಟಗೇರಿ ರೋಟರಿ ಕ್ಲಬ್ ಕಾರ್ಯದರ್ಶಿ ಸಂತೋಷ ಅಕ್ಕಿ, ಗದಗ-ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್ ಅಧ್ಯಕ್ಷೆ ನಾಗರತ್ನ ಮಾರನಬಸರಿ, ವಿಜಯ ಕಾಲೇಜ್ ಆಫ್ ಫೈನ್ ಆರ್ಟ್ಸ್‌ನ ಪ್ರಾಚಾರ್ಯ ಸಿ.ವ್ಹಿ. ಬಡಿಗೇರ ಉಪಸ್ಥಿತರಿದ್ದರು.

ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್ಫೇರ್ ಸೊಸೈಟಿಯ ಅಧ್ಯಕ್ಷ ಶ್ರೀಧರ ಸುಲ್ತಾನಪೂರ ಪರಿಚಯಿಸಿದರು. ಕಾರ್ಯದರ್ಶಿ ಸಂತೋಷ ಅಕ್ಕಿ ನಿರೂಪಿಸಿ ವಂದಿಸಿದರು. ಅಶೋಕ ಟಿ.ಅಕ್ಕಿ ಆತಿಥ್ಯ ವಹಿಸಿದ್ದರು. ಶಿಬಿರದಲ್ಲಿ 7 ಜನರು ರಕ್ತದಾನ ಮಾಡಿದರು.

ಗದಗ-ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್‌ನ ಸವಿತಾ ಶ್ರೀಧರ ಧರ್ಮಾಯತ, ಅಶ್ವಿನಿ ಜಗತಾಪ, ನೀಲಾಂಬಿಕಾ ಉಗಲಾಟ, ಜ್ಯೋತಿ ಭರಮಗೌಡರ, ಸುವರ್ಣ ವಸ್ತ್ರದ, ಪುಷ್ಪಾ ಭಂಡಾರಿ, ಹೇಮಾ ಪುಂಗಾಲಿಯಾ, ವೀಣಾ ತಿರ್ಲಾಪೂರ, ಶ್ರೀದೇವಿ, ವಿಶಾಲಾಕ್ಷೀ ಮೂಲಿಮನಿ ಹಿರಿಯ ವೈದ್ಯರಾದ ಡಾ. ರಾಜಶೇಖರ ಬಳ್ಳಾರಿ, ಡಾ. ಶೇಖರ ಸಜ್ಜನರ, ಡಾ. ಪ್ರದೀಪ ಉಗಲಾಟ, ಎಚ್.ಎಸ್. ಪಾಟೀಲ, ವಿಶ್ವನಾಥ ಯಳಮಲಿ, ಶ್ರೀಧರ ಧರ್ಮಾಯತ, ಬಾಲಕೃಷ್ಣ ಕಾಮತ, ಚನ್ನವೀರ ಹುಣಶೀಕಟ್ಟಿ, ಸುರೇಶ ಕುಂಬಾರ ಸೇರಿದಂತೆ ಕ್ಲಬ್ ಸದಸ್ಯರು, ಕಾಲೇಜು ವಿದ್ಯಾರ್ಥಿಗಳಿದ್ದರು.

> ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ. ಜೆ.ಸಿ. ಶಿರೋಳ ಮಾತನಾಡಿ, ಎಲ್ಲ ದಾನಗಳಲ್ಲಿ ರಕ್ತದಾನ ಶ್ರೇಷ್ಠವಾದದ್ದು. ವ್ಯಕ್ತಿಯ ಜೀವವನ್ನು ಉಳಿಸುವಂತಹ ಶಕ್ತಿ ರಕ್ತಕ್ಕಿದೆ. ರಕ್ತಹೀನತೆ, ಗರ್ಭಿಣಿ ಮಹಿಳೆಯರು, ರಸ್ತೆ ಅಪಘಾತದಲ್ಲಿ ತೀವ್ರ ಗಾಯಗೊಂಡವರಿಗೆ ಹಾಗೂ ಇತರ ವೈದ್ಯಕೀಯ ಚಿಕಿತ್ಸೆಗಳ ಸಂದರ್ಭದಲ್ಲಿ ತುರ್ತಾಗಿ ರೋಗಿಯ ರಕ್ತ ಗುಂಪಿನ ರಕ್ತವೇ ಬೇಕಾಗುವದು. ಸಕಾಲಕ್ಕೆ ರಕ್ತ ಲಭ್ಯವಾದರೆ ಮಾತ್ರ ಜೀವ ಉಳಿಯಬಲ್ಲದು. ಕಾರಣ ದಾನಿಗಳು ನೀಡಿದ ರಕ್ತವನ್ನು ರಕ್ತಭಂಡಾರದಲ್ಲಿ ಶೇಖರಿಸಿಟ್ಟು ಸಕಾಲಕ್ಕೆ ಉಪಯೋಗಿಸಲಾಗುವದು ಎಂದರು.

## ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿಗೆ ಗದಗ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಡಾ.ಬಿ.ಆರ್. ಅಂಬೇಡ್ಕರ್ ಸರಕಾರಿ ಮೆಟ್ರಿಕ್ ಪೂರ್ವ ಬಾಲಕ/ಬಾಲಕಿಯರು 5ರಿಂದ 10ನೇ ತರಗತಿ ಹಾಗೂ ಮೆಟ್ರಿಕ್ ನಂತರದ ಬಾಲಕರ/ಬಾಲಕಿಯರು ಪಿ.ಯು.ಸಿ. ಹಾಗೂ ಪದವಿ ವಸತಿ ನಿಲಯಗಳಿಗೆ 2024-25ನೇ ಸಾಲಿನಲ್ಲಿ ಖಾಲಿ ಇರುವ ಸ್ಥಳಗಳಿಗೆ ಅರ್ಹ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದ, ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಂದ ವಸತಿ ನಿಲಯಗಳಲ್ಲಿ ಪ್ರವೇಶಾತಿ ಕೋರಿ ಎಚ್‌ಎಂಐಎಸ್ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಒಂದು ವೇಳೆ ಎಚ್‌ಎಂಐಎಸ್ ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಲು ಅನಾನುಕೂಲವಾಗುವ ವಿದ್ಯಾರ್ಥಿಗಳು ಮ್ಯಾನುವಲ್ ಮುಖೇನ ಪ್ರವೇಶ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಸಹಾಯಕ ನಿರ್ದೇಶಕರ ಕಚೇರಿ ಸಮಾಜ ಕಲ್ಯಾಣ ಇಲಾಖೆ ಗದಗ, ಮುಂಡರಗಿ, ಶಿರಹಟ್ಟಿ, ರೋಣ ನರಗುಂದ ಇವರಿಗೆ ಸಂಪರ್ಕಿಸಿ ಮ್ಯಾನ್ಯುವಲ್ ಅರ್ಜಿಗಳನ್ನು ಪಡೆದು ಭರ್ತಿ ಮಾಡಿ ಆಯಾ ತಾಲೂಕಿನ ಸಹಾಯಕ ನಿರ್ದೇಶಕರ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka